ಸಂಪುಟ : 11 ಸಂಚಿಕೆ: 45 ಪುಟ : 4+2 ಬೆಲೆ: 3.00 ಬುಧವಾರ ಮಾರ್ಚ್ 18 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 45 Pages : 4+2 Price : 3.00 Wednesday March 18 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಚಿವ ಈಶ್ವರ ಖಂಡ್ರೆಗೆ ಸ್ವಾಗತ



■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಮಹಾಸಭಾದ ರಾಜ್ಯ ಅಧ್ಯಕ್ಷರೂ, ರಾಜ್ಯ ಅರಣ್ಯ ಸಚಿವರೂ ಆದ ಈಶ್ವರ ಖಂಡ್ರೆ ಅವರು ಸೋಮವಾರ ಗದಗಿಗೆ ಆಗಮಿಸಿದ್ದು, ಈ ವೇಳೆ ವೀರಶೈವ ಮಹಾಸಭಾ ಗದಗ ಜಿಲ್ಲಾ ಅಧ್ಯಕ್ಷ ಹಾಗೂ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಹೂಗುಚ್ಛ ನೀಡಿ ಬರಮಾಡಿಕೊಂಡರು. ಈ ಸಂದರ್ಭದಲ್ಲಿ ಪದಾಧಿಕಾರಿಗಳು ಹಾಜರಿದ್ದರು.

## ಪುರಾಣ ಮಂಗಲ ನಿಮಿತ್ತ ಸಾಮೂಹಿಕ ವಿವಾಹ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಯರೇಬೇಲೇರಿ ಗ್ರಾಮದಲ್ಲಿ ಶ್ರೀ ಕಲಬುರ್ಗಿ ಶರಣಬಸವೇಶ್ವರ ಮಹಾಪುರಾಣ ಮಂಗಲ ಅಂಗವಾಗಿ ಮಾರ್ಚ್ 18 ಮತ್ತು 19ರಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಮಾರ್ಚ್ 18ರಂದು ಬೆಳಿಗ್ಗೆ 5 ಗಂಟೆಗೆ ಶರಣಬಸವೇಶ್ವರರಿಗೆ ಮಹಾರುದ್ರಾಭಿಷೇಕ, ಗಂಗಾಪೂಜೆ, ಕುಂಭ ಮೇಳ ಹಾಗೂ ಶರಣಬಸವೇಶ್ವರರ ಭಾವಚಿತ್ರದ ಭವ್ಯ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಕಲ ವಾದ್ಯಗಳೊಂದಿಗೆ ಜರುಗಲಿದೆ.

ಮಾರ್ಚ್ 19ರಂದು ಬೆಳಿಗ್ಗೆ ಶ್ರೀ ಶರಣಬಸವೇಶ್ವರ ಸೇರಿದಂತೆ ಗ್ರಾಮದ ವಿವಿಧ ದೇವಸ್ಥಾನಗಳಲ್ಲಿ ರುದ್ರಾಭಿಷೇಕ ಕಾರ್ಯಕ್ರಮ ನಡೆಯಲಿದ್ದು ಬಳಿಕ ಬೆಳಿಗ್ಗೆ 11.45ಕ್ಕೆ ದೇವಸ್ಥಾನ ಆವರಣದಲ್ಲಿ ಸಾಮೂಹಿಕ ವಿವಾಹ ಸಮಾರಂಭ ಜರುಗಲಿದೆ.

ಈ ಕಾರ್ಯಕ್ರಮಕ್ಕೆ ರೋಣ ಹಿರೇಮಠದ ಡಾ. ವಿಶ್ವನಾಥ ಸ್ವಾಮೀಜಿ ಹಾಗೂ ವಿಶ್ವಾರಾಧ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಮಹೇಶ್ ಡೊಳ್ಳಿ ಅಧ್ಯಕ್ಷತೆ ವಹಿಸಲಿದ್ದಾರೆ. ಮಾಜಿ ಸಚಿವ ಸಿ.ಸಿ. ಪಾಟೀಲ, ಮಾಜಿ ಶಾಸಕ ಬಿ.ಆರ್. ಯಾವಗಲ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ಸಂಜೆ 6 ಗಂಟೆಗೆ ಲಘು ರಥೋತ್ಸವ ನಡೆಯಲಿದ್ದು, ರಾತ್ರಿ 8 ಗಂಟೆಗೆ 29ನೇ ಮಹಾಪುರಾಣ ಮಂಗಲ ಸಮಾರಂಭ ಜರುಗಲಿದೆ. ನರಸಾಪೂರ ಅನ್ನದಾನೇಶ್ವರ ಮಠದ ಡಾ. ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಇಂದಿನಿಂದ ಎಪ್ರಿಲ್ 2ರವರೆಗೆ ಪರೀಕ್ಷೆ - ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕುಗಳಲ್ಲಿನ 12 ಕೇಂದ್ರಗಳ ಪರಿಶೀಲನೆ!

# ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಂಪೂರ್ಣ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾ.18 ರಿಂದ ಎಪ್ರಿಲ್ 2ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಮಂಗಳವಾರ ತಾಲೂಕಿನ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದ್ದು, ತಹಸೀಲ್ದಾರರು, ಬಿಇಒ ಹಾಗೂ ಹಿರಿಯ ಅಧಿಕಾರಿಗಳು ಸಿದ್ಧತೆಗಳನ್ನು ಪರಿಶೀಲಿಸಿದರು.

ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳಲ್ಲಿನ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ್ ಭೇಟಿ ನೀಡಿ ಸಿದ್ಧತೆಗಳ ಅವಲೋಕನ ನಡೆಸಿದರು. ಎರಡು ತಾಲೂಕುಗಳಲ್ಲಿ ಒಟ್ಟು 12 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಲಕ್ಷ್ಮೇಶ್ವರ ತಾಲೂಕಿನಲ್ಲಿ 14 ಸರ್ಕಾರಿ, 8 ಅನುದಾನಿತ ಹಾಗೂ 13 ಅನುದಾನರಹಿತ ಸೇರಿ ಒಟ್ಟು 35 ಪ್ರೌಢಶಾಲೆಗಳಿವೆ. ಶಿರಹಟ್ಟಿ ತಾಲೂಕಿನಲ್ಲಿ 14 ಸರ್ಕಾರಿ, 8 ಅನುದಾನಿತ ಹಾಗೂ 2 ಅನುದಾನರಹಿತ ಶಾಲೆಗಳಿದ್ದು, ಎರಡೂ ತಾಲೂಕುಗಳಿಂದ ಒಟ್ಟು 2839 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ.



**ಲಕ್ಷ್ಮೇಶ್ವರ ಕೇಂದ್ರಗಳು:** ತಾಲೂಕಿನ 6 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು, ಉಮಾ ವಿದ್ಯಾಲಯ ಪುರಸಭೆ ಪ್ರೌಢಶಾಲೆ, ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆ, ಬಿಸಿಎನ್ ಕನ್ನಡ ಮಾಧ್ಯಮ ಪ್ರೌಢಶಾಲೆ, ಸರಕಾರಿ ಪ್ರೌಢಶಾಲೆ ಪು.ಬಡ್ನಿ, ಶಿಗ್ಲಿ ಎಸ್‌ಎಸ್‌ಕೆ ಪ್ರೌಢಶಾಲೆ ಹಾಗೂ ಸರಕಾರಿ ಪ್ರೌಢಶಾಲೆ ಬಾಲೆಹೊಸೂರು ಸೇರಿವೆ. ಒಟ್ಟು 1610 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

**ಶಿರಹಟ್ಟಿ ಕೇಂದ್ರಗಳು:** ಶಿರಹಟ್ಟಿ ತಾಲೂಕಿನಲ್ಲಿ ಶಿವಯೋಗೀಶ್ವರ ಪ್ರೌಢಶಾಲೆ ಹೆಬ್ಬಾಳ, ಎಫ್.ಎಂ. ಡಬ್ಲ್ಯು ಸಂ.ಪ.ಪೂ. ಕಾಲೇಜು ಶಿರಹಟ್ಟಿ, ಎಸ್‌ಎಫ್‌ಸಿ ಆಂಗ್ಲ ▸▸ 4ನೇ ಪುಟಕ್ಕೆ

> "ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಸುಗಮ, ಪಾರದರ್ಶಕವಾಗಿ ನಡೆಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ವಿದ್ಯಾರ್ಥಿಗಳು ಭಯವಿಲ್ಲದೆ ಆತ್ಮಸ್ಥೈರ್ಯದಿಂದ ಪರೀಕ್ಷೆ ಎದುರಿಸಬೇಕು. ಪ್ರವೇಶಪತ್ರ ತೋರಿಸಿ ಬಸ್‌ನಲ್ಲಿ ಉಚಿತ ಪ್ರಯಾಣ ಸೌಲಭ್ಯವಿದೆ. ವದಂತಿಗಳಿಗೆ ಕಿವಿಗೊಡದೆ ಉತ್ತಮ ಅಂಕಗಳ ಗುರಿ ಹೊಂದಿ ಪರೀಕ್ಷೆ ಬರೆಯಿರಿ."
>
> **–ಎಚ್.ಎನ್. ನಾಯ್ಕ್,** ಕ್ಷೇತ್ರ ಶಿಕ್ಷಣಾಧಿಕಾರಿ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ-1 ಸಾಧಕರಿಗೆ ಪ್ರೋತ್ಸಾಹಧನ ಘೋಷಣೆ!

■ವಿಜಯಸಾಕ್ಷಿ ಸುದ್ದಿ, ಗದಗ

2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ರಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಉತ್ತೇಜಿಸಲು Indian Medical Association (ಐಎಂಎ), ಗದಗ ವತಿಯಿಂದ ತಾಲೂಕು ಮಟ್ಟದಲ್ಲಿ ಪ್ರೋತ್ಸಾಹಧನ ನೀಡಲು ವಾಗ್ದಾನ ಮಾಡಲಾಗಿದೆ.

ತಾಲೂಕು ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಒಬ್ಬ ವಿದ್ಯಾರ್ಥಿಗೆ 10,000, ದ್ವಿತೀಯ ಸ್ಥಾನ ಪಡೆದ ತಲಾ 3 ವಿದ್ಯಾರ್ಥಿಗಳಿಗೆ ತಲಾ 5,000 ಹಾಗೂ ತೃತೀಯ ಸ್ಥಾನ ಪಡೆದ 6 ವಿದ್ಯಾರ್ಥಿಗಳಿಗೆ ತಲಾ 2,500ರಂತೆ ಬಹುಮಾನ ನೀಡಲಾಗುತ್ತದೆ. ಪ್ರತಿ ತಾಲೂಕಿಗೆ 40,000ರಂತೆ ಒಟ್ಟು ಜಿಲ್ಲೆಯ ಮಟ್ಟದಲ್ಲಿ 2,40,000 ಪ್ರೋತ್ಸಾಹಧನ ವಿತರಣೆ ಮಾಡಲಾಗುತ್ತದೆ.

ಇದಲ್ಲದೆ, ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಸರ್ಕಾರಿ ಪ್ರೌಢಶಾಲೆಯ ಒಬ್ಬ ವಿದ್ಯಾರ್ಥಿಗೆ Mohammed Sadiq Khazi ಅವರಿಂದ 10,000 ವಿಶೇಷ ಬಹುಮಾನ ನೀಡಲಾಗುವುದು ಎಂದು ತಿಳಿಸಲಾಗಿದೆ.

ಜಿಲ್ಲೆಯ ಎಲ್ಲಾ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಸಾಧಿಸಲು ಶ್ರಮಿಸಬೇಕು ಎಂದು ಅಧಿಕಾರಿಗಳು ಕರೆ ನೀಡಿದ್ದು, ಪ್ರೋತ್ಸಾಹಧನ ಘೋಷಿಸಿರುವ ಸಂಸ್ಥೆಗಳಿಗೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆಡಳಿತ) ಕೃತಜ್ಞತೆ ಸಲ್ಲಿಸಿದ್ದಾರೆ.

### ಕೋಟುಮಚಗಿ ಸರ್ಕಾರಿ ಪ್ರೌಢಶಾಲೆಯಲ್ಲಿ 15 ಲಕ್ಷ ವೆಚ್ಚದ ಸಿ.ಎಸ್.ಆರ್ ಅಭಿವೃದ್ಧಿ ಕಾರ್ಯಗಳ ಉದ್ಘಾಟನೆ

# ಸರ್ಕಾರಿ ಶಾಲೆಗಳು ಖಾಸಗಿ ಶಾಲೆಗಳಿಗಿಂತ ಕಡಿಮೆಯಲ್ಲ: ಜಿ.ಎಸ್. ಪಾಟೀಲ

■ವಿಜಯಸಾಕ್ಷಿ ಸುದ್ದಿ, ಗದಗ

"ಸರ್ಕಾರಿ ಶಾಲೆಗಳು ಯಾವ ಖಾಸಗಿ ಶಾಲೆಗಳಿಗಿಂತಲೂ ಕಡಿಮೆ ಇಲ್ಲ. ನಗರ ಪ್ರದೇಶಗಳಿಗೆ ಮಾತ್ರ ಸೀಮಿತವಾಗಿದ್ದ ಸಿ.ಎಸ್.ಆರ್ ಅನುದಾನವನ್ನು ಗ್ರಾಮೀಣ ಭಾಗಗಳಿಗೆ ತಲುಪಿಸುವುದು ಶ್ಲಾಘನೀಯ." ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಗದಗ ತಾಲೂಕಿನ ಕೋಟುಮಚಗಿ ಸರ್ಕಾರಿ ಪ್ರೌಢಶಾಲೆಯಲ್ಲಿ "ಗ್ರಾಮ ಸ್ಪಂದನ ವಿದ್ಯಾಂಜಲಿ" ಯೋಜನೆಯಡಿ 15 ಲಕ್ಷ ವೆಚ್ಚದ ಸಿ.ಎಸ್.ಆರ್ ಅಭಿವೃದ್ಧಿ ಕಾರ್ಯಗಳ ಉದ್ಘಾಟನೆ ನೆರವೇರಿಸಿ ಮಾತನಾಡಿದರು.



2025-26ನೇ ಸಾಲಿನ ಯೋಜನೆಯಡಿ ಸಾಂಘವಿ ಮೂವರ್ಸ್ ಲಿಮಿಟೆಡ್ ಸಂಸ್ಥೆಯ ಸಿ.ಎಸ್.ಆರ್ ನಿಧಿಯಿಂದ ಶಾಲೆಯ ಪೇಂಟಿಂಗ್, ಆಕರ್ಷಕ ಗೋಡೆ ಬರಹ, ಸ್ಮಾರ್ಟ್ ಕ್ಲಾಸ್ ಯೂನಿಟ್, ಶುದ್ಧ ಕುಡಿಯುವ ನೀರಿನ ಘಟಕ, ಝುರಾಕ್ಸ್ ಯಂತ್ರ ಮತ್ತು ಗಣಿತ, ವಿಜ್ಞಾನ ಹಾಗೂ ಎನ್.ಸಿ.ಸಿ. ಕಲಿಕಾ ಉಪಕರಣಗಳನ್ನು ಒದಗಿಸಲಾಗಿದೆ ಎಂದು ಜಿ.ಎಸ್ ಪಾಟೀಲ ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, "ಇಂತಹ ಯೋಜನೆಗಳು ಸರ್ಕಾರಿ ಶಾಲೆಗಳ ಗುಣಮಟ್ಟದ ಶಿಕ್ಷಣವನ್ನು ಮತ್ತಷ್ಟು ಬಲಪಡಿಸುತ್ತವೆ." ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್.ಡಿ.ಎಂ.ಸಿ ಅಧ್ಯಕ್ಷೆ ಶ್ರೀಮತಿ ಹನುಮವ್ವ ರೇ. ಕಿನ್ನಾಳ ವಹಿಸಿದ್ದರು.

ಸ್ಪಂದನ ಸೇವಾ ಟ್ರಸ್ಟ್ ಅಧ್ಯಕ್ಷ ಗಣಪತಿ ಹೆಗಡೆ ಮಾತನಾಡಿ, ಟ್ರಸ್ಟ್‌ನ ಕಾರ್ಯಚಟುವಟಿಕೆಗಳು ಮತ್ತು ಗ್ರಾಮ ಸ್ಪಂದನ ಯೋಜನೆಯ ಉದ್ದೇಶಗಳನ್ನು ವಿವರಿಸಿದರು.

ಶಾಲೆಯ ಮುಖ್ಯೋಪಾಧ್ಯಾಯ ವಿನಾಯಕ ಆರ್. ಬಂಡಾ ಎಲ್ಲರನ್ನು ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಕ್ಷೇತ್ರಮೋಹನ ಸಾಹು (ಸೈಟ್ ಮ್ಯಾನೇಜರ್), ವಿ.ವಿ. ನಡವಿನಮನಿ, ಡಿ.ಎಸ್. ಕಳಕಣ್ಣವರ ಸೇರಿದಂತೆ ವಿವಿಧ ಅಧಿಕಾರಿಗಳು, ಶಿಕ್ಷಕರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

ವೇದಮೂರ್ತಿ ಫಕೀರಯ್ಯ ಹಿರೇಮಠ ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದರು. ಈ ಸಂದರ್ಭದಲ್ಲಿ ಆರ್.ಎಸ್. ಬುರಡಿ, ಕ್ಷೇತ್ರಮೋಹನ ಸಾಹು, ಸುಜಾತಾ (ಸಿ.ಎಸ್.ಆರ್ ಮುಖ್ಯಸ್ಥೆ) ಹಾಗೂ ಗಣಪತಿ ಹೆಗಡೆ ಅವರನ್ನು ಸನ್ಮಾನಿಸಲಾಯಿತು.

> "ಸರ್ಕಾರಿ ಶಾಲೆಗಳು ಯಾವ ಖಾಸಗಿ ಶಾಲೆಗಳಿಗಿಂತಲೂ ಕಡಿಮೆ ಇಲ್ಲ. ನಗರ ಪ್ರದೇಶಗಳಿಗೆ ಮಾತ್ರ ಸೀಮಿತವಾಗಿದ್ದ ಸಿ.ಎಸ್.ಆರ್ ಅನುದಾನವನ್ನು ಗ್ರಾಮೀಣ ಭಾಗಗಳಿಗೆ ತಲುಪಿಸುವುದು ಶ್ಲಾಘನೀಯ."
>
> **– ಜಿ.ಎಸ್. ಪಾಟೀಲ, ಶಾಸಕರು.**

### ತ್ಯಾಜ್ಯ ನಿರ್ವಹಣೆಗೆ ಕಟ್ಟು ನಿಟ್ಟಿನ ಕ್ರಮಕ್ಕೆ ಡಿಸಿ ಸ್ನೇಹಲ್ ಸೂಚನೆ

# ಮೂಲದಲ್ಲೇ ಕಸದ ವಿಂಗಡಣೆ ಕಡ್ಡಾಯ




■ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಾರ್ವಜನಿಕರಲ್ಲಿ ಏಕಬಳಕೆಯ ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುವ ಬಗ್ಗೆ ಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯ. ಮನೆಮನೆ ಸಂಗ್ರಹವಾಗುವ ಕಸವನ್ನು ಮೂಲದಲ್ಲಿಯೇ ಹಸಿ ಕಸ, ಒಣ ಕಸ ಹಾಗೂ ಗೃಹ ಬಳಕೆಯ ಅಪಾಯಕಾರಿ ತ್ಯಾಜ್ಯವೆಂದು ವಿಂಗಡಿಸುವ ವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಜಾರಿಗೆ ತರಬೇಕೆಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ತಿಳಿಸಿದರು.

ಜಿಲ್ಲೆಯಲ್ಲಿನ ಘನ ತ್ಯಾಜ್ಯ ಹಾಗೂ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆಯನ್ನು ಪ ರಿ ಣಾ ಮ ಕಾ ರಿ ಯಾ ಗಿ ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿ ಸ್ನೇಹಲ್ ಆರ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ಜನಜಾಗೃತಿ ಕಾರ್ಯಕ್ರಮಗಳ ಮೂಲಕ ತ್ಯಾಜ್ಯ ನಿರ್ವಹಣೆಯ ಬಗ್ಗೆ ಅರಿವು ಹೆಚ್ಚಿಸಬೇಕು. ಘನ ತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಅಭಿವೃದ್ಧಿಪಡಿಸುವ ಜೊತೆಗೆ ತ್ಯಾಜ್ಯ ಸುಡುವಿಕೆ ಕುರಿತು ದೂರುಗಳು ಬಂದಲ್ಲಿ ತಕ್ಷಣ ಸ್ಪಂದಿಸಿ ಪರಿಹರಿಸಬೇಕು ಎಂದರು. ಇದೇ ವೇಳೆ ಸಾರ್ವಜನಿಕರಿಂದ ಬರುವ ದೂರುಗಳ ಹಿನ್ನೆಲೆಯಲ್ಲಿ ಸ್ಥಳ ಪರಿಶೀಲನೆ ನಡೆಸಿ ಸಮಸ್ಯೆಗಳನ್ನು ತಕ್ಷಣ ಬಗೆಹರಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪರಿಸರ ಸಂರಕ್ಷಣೆಯ ದೃಷ್ಟಿಯಿಂದ ಪ್ಲಾಸ್ಟಿಕ್‌ಗೆ ಪರ್ಯಾಯ ವಸ್ತುಗಳ ಬಳಕೆಯನ್ನು ಉತ್ತೇಜಿಸುವುದು ಅಗತ್ಯವಿದೆ. ತ್ಯಾಜ್ಯ ನೀರು ಕುಡಿಯುವ ನೀರಿನ ಮೂಲಗಳಿಗೆ ಸೇರುವುದನ್ನು ತಪ್ಪಿಸಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ನಿಯಮಗಳನ್ನು ಉಲ್ಲಂಘಿಸುವ ವ್ಯಕ್ತಿಗಳು ಹಾಗೂ ಉದ್ಯಮಗಳ ವಿರುದ್ಧ ದಂಡ ವಿಧಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಿದರು.

ಸಭೆಯಲ್ಲಿ ಪಿಇಟಿ ಬಾಟಲ್ ತ್ಯಾಜ್ಯಗಳನ್ನು ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ನಿಯಮಗಳ ಅಡಿಯಲ್ಲಿ ಸಮರ್ಪಕವಾಗಿ ನಿರ್ವಹಿಸುವುದು ಹಾಗೂ ಘನ ತ್ಯಾಜ್ಯ ನಿರ್ವಹಣೆ ನಿಯಮಗಳ ಪ್ರಕಾರ ಘನ ತ್ಯಾಜ್ಯವನ್ನು ವಿಂಗಡಿಸಿ ವಿಲೇವಾರಿ ಮಾಡುವ ಕುರಿತು ನಗರ ಸ್ಥಳೀಯ ಸಂಸ್ಥೆಗಳು ಕೈಗೊಂಡಿರುವ ಕ್ರಮಗಳನ್ನು ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಹಿರಿಯ ಪರಿಸರ ಅಧಿಕಾರಿ ಜಗದೀಶ ಐ.ಎಚ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಮಹಾನಗರಪಾಲಿಕೆಯ ಅಧೀಕ್ಷಕ ಅಭಿಯಂತರ ವಿಜಯಕುಮಾರ ಸೇರಿದಂತೆ ವಿವಿಧ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಹಾಗೂ ಅಭಿಯಂತರರು ಸಭೆಯಲ್ಲಿ ಭಾಗವಹಿಸಿದ್ದರು.

### ಕನೇರಿ ಶ್ರೀಗಳ ಆರೋಪಕ್ಕೆ ತೋಂಟದ ಶ್ರೀಗಳ ತಿರುಗೇಟು

# "ಸುಳ್ಳು ಆರೋಪಗಳಿಂದ ಚರಿತ್ರಾಹರಣ ಯತ್ನ"

■ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದ ಸಿದ್ಧರಾಮ ಸ್ವಾಮಿಗಳು ಕಾಡಸಿದ್ಧೇಶ್ವರ ಸ್ವಾಮಿಗಳು ಮಾಡಿರುವ ಆರೋಪಗಳಿಗೆ ತೀವ್ರ ಪ್ರತಿಕ್ರಿಯೆ ನೀಡಿದ್ದು, ತಮ್ಮ ವಿರುದ್ಧ ಹೊರಡಿಸಿರುವ ಎಲ್ಲಾ ಆರೋಪಗಳು ಆಧಾರರಹಿತ ಮತ್ತು ಸುಳ್ಳುಗಳಾಗಿವೆ ಎಂದು ಸ್ಪಷ್ಟಪಡಿಸಿದ್ದಾರೆ.

ಇತ್ತೀಚೆಗೆ ರಬಕವಿ-ಬನಹಟ್ಟಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಣೇರಿ ಮಠದ ಶ್ರೀಗಳು "ಒಬ್ಬ ಸ್ವಾಮಿ" ಎಂಬ ಉಲ್ಲೇಖದೊಂದಿಗೆ ತಮ್ಮ ಹೆಸರನ್ನು ಸೂಚಿಸಿ ಆರೋಪ ಮಾಡಿರುವುದು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿರುವ ಹಿನ್ನೆಲೆಯಲ್ಲಿ, ಡಂಬಳ-ಗದಗ ತೋಂಟದಾರ್ಯ ಮಠದಿಂದ ಅಧಿಕೃತ ಪ್ರಕಟಣೆ ಬಿಡುಗಡೆ ಮಾಡಲಾಗಿದೆ.

ಪ್ರಕಟಣೆಯಲ್ಲಿ, "ಮರಾಠಿ ಭಾಷೆಯ ಕುರಾನ್ ಅನ್ನು ಕನ್ನಡಕ್ಕೆ ಅನುವಾದಿಸಿ ಮಠದಿಂದಲೇ ಪ್ರಕಟಿಸಲಾಗಿದೆ" ಎಂಬ ಆರೋಪವನ್ನು ತಳ್ಳಿಹಾಕಿರುವ ಶ್ರೀಗಳು, ತಾವು ಅನುವಾದಿಸಿರುವುದು ಹಿಂದೂ ಧರ್ಮದ ಮಹಾನ್ ಸಂತ ವಿನೋಬಾ ಭಾವೆ ಅವರ



'ಇಸ್ಲಾಂ ಧರ್ಮ ಸಂದೇಶ' ಎಂಬ ಹಿಂದಿ ಕೃತಿಯಾಗಿದೆ ಎಂದು ವಿವರಿಸಿದ್ದಾರೆ. ಇದು ಕುರಾನ್ ಅಲ್ಲ, ಮರಾಠಿ ಕೃತಿಯೂ ಅಲ್ಲ, ಹಾಗೂ ಮಠದಿಂದ ಪ್ರಕಟಿತವಾಗಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ.

ಈ ಕೃತಿಯ ಲೋಕಾರ್ಪಣೆ ಕಾರ್ಯಕ್ರಮವು ಪೂಜ್ಯ ಸಿದ್ಧೇಶ್ವರ ಮಹಾಸ್ವಾಮಿಗಳು ಅವರ ಸಾನಿಧ್ಯದಲ್ಲಿ ನಡೆದಿದ್ದು, ಆ ಕಾರ್ಯಕ್ರಮಕ್ಕೆ ಕಾಡಸಿದ್ಧೇಶ್ವರ ಸ್ವಾಮಿಗಳನ್ನೂ ಆಹ್ವಾನಿಸಲಾಗಿತ್ತು ಎಂಬುದನ್ನು ಅವರು ನೆನಪಿಸಿದ್ದಾರೆ. ಇನ್ನು "ಭಗವದ್ಗೀತೆಯನ್ನು ನಿಂದಿಸಲಾಗಿದೆ" ಎಂಬ ಆರೋಪವನ್ನೂ ಖಂಡಿಸಿರುವ ಶ್ರೀಗಳು, "ನಾವು ಯಾವ ಧರ್ಮ, ದೇವರು ಅಥವಾ ಭಗವದ್ಗೀತೆಯನ್ನು ಯಾವತ್ತೂ ನಿಂದಿಸಿಲ್ಲ. ಇಂತಹ ಹೇಳಿಕೆಗಳು ಕುತ್ಸಿತ ಮನೋಭಾವದಿಂದ ಮಾಡಿದ ಸುಳ್ಳು ಆರೋಪಗಳು" ಎಂದು ಹೇಳಿದ್ದಾರೆ.

ಭಾರತೀಯ ತತ್ವಶಾಸ್ತ್ರ ಕೃತಿಯಲ್ಲಿ ಡಾ. ಚಂದ್ರಧರ ಶರ್ಮಾ ಅವರ ಭಗವದ್ಗೀತೆಯ ಭಾಗವನ್ನು ಅನುವಾದಿಸಿರುವುದಲ್ಲದೆ, ಸಿದ್ಧೇಶ್ವರ ಮಹಾಸ್ವಾಮಿಗಳ ಭಗವದ್ಗೀತಾ ಪ್ರವಚನದ ಕರಡು ಪ್ರತಿಗೂ ತಿದ್ದುಪಡಿ ನೆರವು ನೀಡಿರುವುದಾಗಿ ತಿಳಿಸಿದ್ದಾರೆ. ಪದೇ ಪದೇ ಆಧಾರರಹಿತ ಆರೋಪಗಳನ್ನು ಮಾಡುವುದು ವ್ಯಕ್ತಿಯ ಚರಿತ್ರಾಹರಣ ಮಾಡುವ ಪ್ರಯತ್ನವಾಗಿದ್ದು, ಒಂದು ಧರ್ಮದವರನ್ನು ಮತ್ತೊಬ್ಬರ ವಿರುದ್ಧ ಎತ್ತಿಕಟ್ಟುವ ಮೂಲಕ ಸಮಾಜದಲ್ಲಿ ದ್ವೇಷ ಮತ್ತು ಅಶಾಂತಿ ಸೃಷ್ಟಿಸುವ ಉದ್ದೇಶ ಹೊಂದಿದೆ ಎಂದು ಅವರು ಆರೋಪಿಸಿದ್ದಾರೆ.

"ಈ ರೀತಿಯ ಸುಳ್ಳು ಆರೋಪಗಳ ಮೂಲಕ ನಮ್ಮ ಚರಿತ್ರಾಹರಣಕ್ಕೆ ಮೂರನೇ ಬಾರಿ ಪ್ರಯತ್ನಿಸಲಾಗುತ್ತಿದೆ. ಜನರು ಇದನ್ನು ಗಮನಿಸುತ್ತಿದ್ದಾರೆ," ಎಂದು ಅವರು ಹೇಳಿದರು. ಇದೇ ವೇಳೆ, ಕಣೇರಿ ಶ್ರೀಗಳ ವಿರುದ್ಧ ಈಗಾಗಲೇ ಹೈಕೋರ್ಟ್ ಮತ್ತು ಸುಪ್ರೀಂಕೋರ್ಟ್ ತೀವ್ರ ಅಭಿಪ್ರಾಯ ವ್ಯಕ್ತಪಡಿಸಿರುವುದನ್ನು ಉಲ್ಲೇಖಿಸಿದ ಅವರು, "ಇಂತಹ ಹೇಳಿಕೆಗಳು ಅಭಿವ್ಯಕ್ತಿ ಸ್ವಾತಂತ್ರ್ಯದ ವ್ಯಾಪ್ತಿಗೆ ಬರುವುದಿಲ್ಲ" ಎಂದು ಹೇಳಿದ್ದಾರೆ. ಪದೇ ಪದೇ ಅನಾಗರಿಕ ಭಾಷೆಯಲ್ಲಿ ಹೇಳಿಕೆಗಳನ್ನು ನೀಡುತ್ತಿರುವುದು ವಿಷಾದನೀಯ ಸಂಗತಿ ಎಂದು ಅಭಿಪ್ರಾಯಪಟ್ಟ ಅವರು, ಸಮಾಜದಲ್ಲಿ ಗೊಂದಲ ಮತ್ತು ಅಶಾಂತಿ ಉಂಟಾಗದಂತೆ ಹಾಗೂ ಭಕ್ತರಲ್ಲಿ ತಪ್ಪು ಕಲ್ಪನೆ ಮೂಡದಂತೆ ಈ ಸ್ಪಷ್ಟೀಕರಣ ನೀಡಲಾಗಿದೆ ಎಂದು ತಿಳಿಸಿದ್ದಾರೆ.

> "ಕುರಾನ್ ಅನುವಾದದ ಸುಳ್ಳು ಆರೋಪ ತಳ್ಳಿಹಾಕುತ್ತೇವೆ; ನಾವು ಅನುವಾದಿಸಿರುವುದು ಹಿಂದೂ ಧರ್ಮದ ಮಹಾನ್ ಸಂತ ವಿನೋಬ ಭಾವೆ ಅವರ ಹಿಂದಿ ಕೃತಿ 'ಇಸ್ಲಾಂ ಧರ್ಮ ಸಂದೇಶ' ಮಾತ್ರ."
>
> **–ಸಿದ್ಧರಾಮ ಸ್ವಾಮೀಜಿ,** ತೋಂಟದಾರ್ಯ ಮಠ. ಗದಗ

# ಇಂದಿನಿಂದ ಎಸ್‌ಎಸ್‌ಎಲ್‌ಸಿ-1 ಪರೀಕ್ಷೆ: 654 ವಿದ್ಯಾರ್ಥಿಗಳು ನೋಂದಣಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮಾರ್ಚ್ 18ರಿಂದ ರಾಜ್ಯಾದ್ಯಂತ ಪ್ರಾರಂಭವಾಗಲಿರುವ ಎಸ್‌ಎಸ್‌ಎಲ್‌ಸಿ-1 ಪರೀಕ್ಷೆಗೆ ನರೇಗಲ್ಲ ಪಟ್ಟಣವೂ ಸಜ್ಜಾಗಿದೆ.

ಪಟ್ಟಣದಲ್ಲಿ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆ ಮತ್ತು ಕೆ.ಆರ್. ಕುಲಕರ್ಣಿ ಸರಕಾರಿ ಪ್ರೌಢಶಾಲೆ ಸೇರಿ ಎರಡು ಪರೀಕ್ಷಾ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ನರೇಗಲ್ಲ ಮತ್ತು ಸುತ್ತಲಿನ ಜಕ್ಕಲಿ, ಮಾರನಬಸರಿ, ಅಬ್ಬಿಗೇರಿ, ಹಾಲಕೆರೆ, ನಿಡಗುಂದಿ ಗ್ರಾಮಗಳ ಒಟ್ಟು 654 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ.

ಶ್ರೀ ಅನ್ನದಾನೇಶ್ವರ ಪ್ರೌಢಶಾಲೆ ಪರೀಕ್ಷಾ ಕೇಂದ್ರದಲ್ಲಿ 375 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಅವರಲ್ಲಿ 219 ಬಾಲಕರು ಮತ್ತು 156 ಬಾಲಿಕಿಯರು. ಕನ್ನಡ ಪರೀಕ್ಷೆಗೆ 16 ಬ್ಲಾಕ್‌ಗಳ ವ್ಯವಸ್ಥೆ ಮಾಡಲಾಗಿದ್ದು, ಉಪ-ಅಧೀಕ್ಷಕರಾಗಿ ಎಂ.ಬಿ. ಸಜ್ಜನ, ಮುಖ್ಯ ಅಧೀಕ್ಷಕರಾಗಿ ರಾಜಶೇಖರ ತುಕ್ಕಲದೋಣಿ ಕಾರ್ಯ ನಿರ್ವಹಿಸಲಿದ್ದಾರೆ ಎಂದು ಮುಖ್ಯ ಅಧೀಕ್ಷಕ ಸಂಗಮೇಶ ಹೂಲಗೇರಿ ತಿಳಿಸಿದ್ದಾರೆ.

ಕೆ.ಆರ್. ಕುಲಕರ್ಣಿ ಸರಕಾರಿ ಪ್ರೌಢಶಾಲೆ ಪರೀಕ್ಷಾ ಕೇಂದ್ರದಲ್ಲಿ 12 ಬ್ಲಾಕ್‌ಗಳ ವ್ಯವಸ್ಥೆಯೊಂದಿಗೆ 279 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ: 134 ಬಾಲಕರು ಮತ್ತು 145 ಬಾಲಿಕಿಯರು ಪರೀಕ್ಷೆ ಎದುರಿಸಲಿದ್ದಾರೆ. ಡಿ.ಎಸ್. ಬಡಿಗೇರ ಅಧೀಕ್ಷಕರಾಗಿ ಮತ್ತು ಎಸ್.ಎಫ್. ಚುಂಚಾ ಮುಖ್ಯ ಅಧೀಕ್ಷಕರಾಗಿ ಕಾರ್ಯ ನಿರ್ವಹಿಸಲಿದ್ದಾರೆ.

ಸರಕಾರದ ನಿಯಮಾವಳಿ ಮತ್ತು ಇಲಾಖೆಯ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಂತೆ ಪರೀಕ್ಷೆಯನ್ನು ಶಾಂತ, ಸುವ್ಯವಸ್ಥಿತವಾಗಿ ನಡೆಸಲು ಎಲ್ಲಾ ಸಿದ್ಧತೆಗಳನ್ನು ನಡೆಸಲಾಗಿದೆ.

### ಸಂಪ್ರದಾಯ, ಸಂಸ್ಕೃತಿ ಮತ್ತು ಸಂತೋಷದ ಸಂಕೇತ!

# ಯುಗಾದಿ: ಹೊಸ ವರ್ಷದ ಹಬ್ಬ, ಹೊಸ ಆಶೆಗಳ ಪ್ರಾರಂಭ

ಯುಗಾದಿ ನಮ್ಮ ಕರ್ನಾಟಕದ ಅತ್ಯಂತ ಮಹತ್ವದ ಹಬ್ಬಗಳಲ್ಲಿ ಒಂದಾಗಿದೆ. ಇದು ಹಿಂದೂಗಳ ಹೊಸ ವರ್ಷದ ಆರಂಭವನ್ನು ಸೂಚಿಸುವ ಹಬ್ಬವಾಗಿದೆ. "ಯುಗಾದಿ" ಎಂಬ ಪದವು "ಯುಗ" ಮತ್ತು "ಆದಿ" ಎಂಬ ಎರಡು ಪದಗಳಿಂದ ಕೂಡಿದ್ದು, ಇದರ ಅರ್ಥ ಹೊಸ ಯುಗದ ಆರಂಭ ಎಂದು ಹೇಳಬಹುದು. ಈ ಹಬ್ಬವನ್ನು ಚೈತ್ರ ಮಾಸದ ಶುಕ್ಲ ಪಕ್ಷದ ಪ್ರತಿಪದೆಯಂದು ಆಚರಿಸಲಾಗುತ್ತದೆ. ಇದು ಪ್ರಕೃತಿಯಲ್ಲಿಯೂ ಹೊಸತನದ ಆರಂಭವಾಗಿರುವುದರಿಂದ ಯುಗಾದಿಗೆ ವಿಶೇಷ ಮಹತ್ವ ಇದೆ.

ಯುಗಾದಿ ಹಬ್ಬದಂದು ಜನರು ಮುಂಜಾನೆ ಬೇಗ ಎದ್ದು ಎಣ್ಣೆ ಸ್ನಾನ ಮಾಡಿ ಶುದ್ಧವಾಗಿ ಹೊಸ ಬಟ್ಟೆಗಳನ್ನು ಧರಿಸುತ್ತಾರೆ. ಮನೆಗಳನ್ನು ಚೆನ್ನಾಗಿ ಸ್ವಚ್ಛಗೊಳಿಸಿ ಬಾಗಿಲಿಗೆ ಮಾವಿನ ಎಲೆಗಳಿಂದ ತೋರಣ ಕಟ್ಟುತ್ತಾರೆ. ಇದು ಶುಭದ ಸಂಕೇತವೆಂದು ಪರಿಗಣಿಸಲಾಗುತ್ತದೆ. ಮನೆ ಮುಂದೆ ಮಹಿಳೆಯರು ರಂಗೋಲಿ ಹಾಕಿ ಹಬ್ಬದ ಸಂಭ್ರಮವನ್ನು ಹೆಚ್ಚಿಸುತ್ತಾರೆ. ಬಳಿಕ ದೇವರ ಪೂಜೆ ಮಾಡಿ ಕುಟುಂಬದವರು ಒಟ್ಟಾಗಿ ಹಬ್ಬವನ್ನು ಆಚರಿಸುತ್ತಾರೆ.

ಯುಗಾದಿಯ ಪ್ರಮುಖ ವಿಶೇಷತೆ ಎಂದರೆ "ಬೇವು-ಬೆಲ್ಲ" ತಿನ್ನುವುದು. ಬೇವು ಕಹಿಯಾಗಿರುತ್ತದೆ ಮತ್ತು ಬೆಲ್ಲ ಸಿಹಿಯಾಗಿರುತ್ತದೆ. ಈ ಎರಡನ್ನು ಸೇರಿಸಿ ತಿನ್ನುವುದರಿಂದ ಜೀವನದಲ್ಲಿ ಸಿಹಿ-ಕಹಿ ಅನುಭವಗಳು ಎರಡೂ ಇರಬಹುದು ಎಂಬ ಸಂದೇಶವನ್ನು



ನೀಡುತ್ತದೆ. ಇದರೊಂದಿಗೆ ಹುಣಸೆ, ಉಪ್ಪು, ಮೆಣಸು, ಮಸಾಲೆಗಳನ್ನು ಸೇರಿಸಿ ಮಾಡುವ "ಯುಗಾದಿ ಪಚಡಿ" ಜೀವನದ ವಿವಿಧ ಭಾವನೆಗಳನ್ನು ಪ್ರತಿನಿಧಿಸುತ್ತದೆ. ಇದರಿಂದ ನಾವು ಜೀವನದ ಎಲ್ಲಾ ಪರಿಸ್ಥಿತಿಗಳನ್ನು ಸಮಾನವಾಗಿ ಸ್ವೀಕರಿಸಬೇಕು ಎಂಬ ಪಾಠವನ್ನು ಕಲಿಯಬಹುದು.

ಈ ಹಬ್ಬದಂದು ಪಂಚಾಂಗ ಶ್ರವಣವೂ ನಡೆಯುತ್ತದೆ. ಪಂಡಿತರು ಹೊಸ ವರ್ಷದ ಫಲಗಳನ್ನು ವಿವರಿಸುತ್ತಾರೆ.

ರಾಶಿ ಫಲ, ಹವಾಮಾನ, ಕೃಷಿ, ಆರ್ಥಿಕ ಸ್ಥಿತಿ ಮುಂತಾದ ವಿಷಯಗಳ ಕುರಿತು ತಿಳಿಸುತ್ತಾರೆ. ಜನರು ಇದನ್ನು ಆಲಿಸಿ ಮುಂದಿನ ಜೀವನದ ಬಗ್ಗೆ ಯೋಜನೆ ಮಾಡುತ್ತಾರೆ. ಇದು ನಮ್ಮ ಸಂಪ್ರದಾಯದ ಒಂದು ಪ್ರಮುಖ ಅಂಗವಾಗಿದೆ.

ಯುಗಾದಿ ಹಬ್ಬದಂದು ವಿಶೇಷವಾಗಿ ವಿವಿಧ ರುಚಿಕರವಾದ ಊಟಗಳನ್ನು ತಯಾರಿಸಲಾಗುತ್ತದೆ. ಹೋಳಿಗೆ, ಪಾಯಸ, ವಡೆ, ಪುಲಿಯೋಗರೆ ಮುಂತಾದ ತಿನಿಸುಗಳನ್ನು ಮಾಡುತ್ತಾರೆ. ಮನೆಯ ಎಲ್ಲಾ ಸದಸ್ಯರು ಸೇರಿ ಈ ಊಟವನ್ನು ಸವಿದು ಹಬ್ಬದ ಸಂತೋಷವನ್ನು ಹಂಚಿಕೊಳ್ಳುತ್ತಾರೆ. ಬಂಧು-ಬಳಗದವರು ಒಬ್ಬರ ಮನೆಗೆ ಮತ್ತೊಬ್ಬರು ಭೇಟಿ ನೀಡಿ ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳುತ್ತಾರೆ.

ಯುಗಾದಿ ಹಬ್ಬವು ಕೇವಲ ಒಂದು ಹಬ್ಬವಷ್ಟೇ ಅಲ್ಲ, ಇದು ನಮ್ಮ ಸಂಸ್ಕೃತಿ, ಪರಂಪರೆ ಮತ್ತು ಒಗ್ಗಟ್ಟಿನ ಪ್ರತೀಕವಾಗಿದೆ.

ಇದು ಹೊಸ ಆಶೆಗಳು, ಹೊಸ ಕನಸುಗಳು ಮತ್ತು ಹೊಸ ಗುರಿಗಳನ್ನು ರೂಪಿಸಲು ನಮಗೆ ಪ್ರೇರಣೆ ನೀಡುತ್ತದೆ. ಕಳೆದ ವರ್ಷದ ತಪ್ಪುಗಳನ್ನು ಸರಿಪಡಿಸಿ, ಹೊಸ ವರ್ಷದಲ್ಲಿ ಉತ್ತಮ ಜೀವನವನ್ನು ನಡೆಸಲು ಸಂಕಲ್ಪ ಮಾಡುವುದು ಈ ಹಬ್ಬದ ಮುಖ್ಯ ಉದ್ದೇಶವಾಗಿದೆ.

ಒಟ್ಟಿನಲ್ಲಿ ಯುಗಾದಿ ಹಬ್ಬವು ಸಂತೋಷ, ಶಾಂತಿ ಮತ್ತು ಸೌಹಾರ್ದತೆಯ ಸಂಕೇತವಾಗಿದೆ. ನಾವು ಎಲ್ಲರೂ ಈ ಹಬ್ಬವನ್ನು ಉತ್ಸಾಹದಿಂದ ಆಚರಿಸಿ ನಮ್ಮ ಸಂಸ್ಕೃತಿಯನ್ನು ಉಳಿಸಿ ಬೆಳೆಸಬೇಕು.



ಒಟ್ಟಾರೆ ಯುಗಾದಿ ನಮಗೆ ಹೊಸ ಬೆಳಕು, ಹೊಸ ಆಶಾವಾದ ಮತ್ತು ಉತ್ತಮ ಭವಿಷ್ಯದ ದಾರಿಯನ್ನು ತೋರಿಸುವ ಹಬ್ಬವಾಗಿದೆ.

**– ಮಾಳೇಶ ಮಾದರ,** ಪ್ರಶಿಕ್ಷಣಾರ್ಥಿ. ವಾರ್ತಾ ಇಲಾಖೆ, ಧಾರವಾಡ.

### ಹಗರಿಬೊಮ್ಮನಹಳ್ಳಿಯಲ್ಲಿ ಪದಗ್ರಹಣ ಸಮಾರಂಭ – ಸಮಾಜ ಸೇವೆ, ಯುವ ಸಬಲೀಕರಣಕ್ಕೆ ಆದ್ಯತೆ

# ಆರ್ಯವೈಶ್ಯ ಯುವಜನ ಮಹಾಸಭೆಗೆ ಭೀಮರಾಜ್ ಗಂಗಾವತಿ ರಾಜ್ಯಾಧ್ಯಕ್ಷ!



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕರ್ನಾಟಕ ಆರ್ಯವೈಶ್ಯ ಯುವಜನ ಮಹಾಸಭಾ (ರಿ) ವತಿಯಿಂದ 2026-28ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವು ಪಟ್ಟಣದ ರಾಮನಗರದಲ್ಲಿರುವ ಶ್ರೀ ವಾಸವಿ ಕನ್ಯಾ ಪರಮೇಶ್ವರಿ ಕಲ್ಯಾಣ ಮಂಟಪದಲ್ಲಿ ಜರುಗಿತು.

ಈ ಸಂದರ್ಭದಲ್ಲಿ ಜಿ.ವಿ. ಭೀಮರಾಜ್ ಗಂಗಾವತಿ (ಭರತ್) ಅವರನ್ನು ರಾಜ್ಯಾಧ್ಯಕ್ಷರಾಗಿ ಆಯ್ಕೆ ಮಾಡಿ ಪದಗ್ರಹಣ ಮಾಡಿಸಲಾಯಿತು. ಸಮಾರಂಭದಲ್ಲಿ ಉದ್ಘಾಟಕರಾಗಿ ಆರ್.ಪಿ. ರವಿಶಂಕರ್ ಉಪಸ್ಥಿತರಿದ್ದು, ಶಾಸಕರಾದ ಕೆ. ನೇಮಿರಾಜ ನಾಯ್ಕ್, ಎನ್. ಸುರೇಶ್ ಸೇರಿದಂತೆ ಸಮಾಜದ ಹಲವು ಮುಖಂಡರು ಭಾಗವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಗಿರೀಶ್ ಪೆಂಡುಕೂರು, ಕೊರಗಲ್ ರಾಘವೇಂದ್ರ, ಡಿ.ವಿ. ಸತ್ಯನಾರಾಯಣ, ಎ.ಟಿ. ಕೋಟೇಶ್ವರ, ಎಸ್.ಎನ್. ಶಬರೀಶ್, ಎನ್. ಶುಭಶ್ರೀ, ಜಿ. ಲಕ್ಷ್ಮಿಪತಿ, ಆಂಜನೇಯ ಶಟ್ರು, ಬಿ. ರಾಘವೇಂದ್ರ, ಬಿ. ಸವಿತಾ ರಮೇಶ್, ಹೆಚ್. ಲಕ್ಷ್ಮಿ ರಾಘವೇಂದ್ರ, ಜಿ.ಬಿ. ಕೋಟೇಶ್ವರ ಸೇರಿದಂತೆ ಅನೇಕರು ಹಾಜರಿದ್ದರು. ಕಾರ್ಯಕ್ರಮದಲ್ಲಿ ನೂತನ ಪದಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರ ಮಾಡಲಾಗಿದ್ದು, ಸಂಘದ ಮುಂದಿನ ಯೋಜನೆಗಳು ಹಾಗೂ ಕಾರ್ಯಚಟುವಟಿಕೆಗಳ ಬಗ್ಗೆ ವಿವರಿಸಿ ಶುಭಾಶಯ ಕೋರಲಾಯಿತು.

ಈ ಸಂದರ್ಭದಲ್ಲಿ ವಾಸವಿ ಆರ್ಯವೈಶ್ಯ ಸಂಘ, ವಾಸವಿ ಯುವಜನ ಸಂಘ, ಮಹಿಳಾ ಆರ್ಯವೈಶ್ಯ ಸಂಘ ಹಾಗೂ ವಾಸವಿ ವನಿತಾ ಆರ್ಯವೈಶ್ಯ ಸಂಘದ ಸದಸ್ಯರು ಹಾಗೂ ಸಮಾಜದ ಮುಖಂಡರು ಭಾಗವಹಿಸಿದ್ದರು.

**"ಯುವಕರ ಸಬಲೀಕರಣಕ್ಕೆ ವಿಶೇಷ ಒತ್ತು"**

ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಮಾತನಾಡಿದ ಜಿ.ವಿ. ಭೀಮರಾಜ್ ಗಂಗಾವತಿ (ಭರತ್) ಅವರು, ಆರ್ಯವೈಶ್ಯ ಸಮುದಾಯದ ಏಕತೆ, ಶಿಕ್ಷಣ ಹಾಗೂ ಸಾಮಾಜಿಕ ಸೇವೆಗೆ ಆದ್ಯತೆ ನೀಡುವುದಾಗಿ ತಿಳಿಸಿದರು. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಂಘಟನೆಯನ್ನು ಬಲಪಡಿಸಿ ಸಮಾಜಮುಖಿ ಕಾರ್ಯಗಳನ್ನು ಹಮ್ಮಿಕೊಳ್ಳುವುದು ನಮ್ಮ ಗುರಿಯಾಗಿದೆ. ಎಲ್ಲರ ಸಹಕಾರದಿಂದ ಸಂಘವನ್ನು ಇನ್ನಷ್ಟು ಶಕ್ತಿಶಾಲಿಯಾಗಿಸಲು ಪ್ರಯತ್ನಿಸಲಾಗುವುದು ಎಂದು ಹೇಳಿದರು.

# ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತಾಗಿ ಒಂದು ದಿನದ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಆತ್ಮವಿಶ್ವಾಸ - ಸ್ಪರ್ಧಾತ್ಮಕ ಪರೀಕ್ಷಾ ಕೋಶದ ಆಯೋಜನೆಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತಾಗಿ ಒಂದು ದಿನದ ಕಾರ್ಯಾಗಾರ ಮಾರ್ಚ್ 18ರಂದು ಬೆಳಿಗ್ಗೆ 10.30 ಗಂಟೆಗೆ ವಿಶ್ವವಿದ್ಯಾಲಯದ ಕೌಶಲ್ಯ ಅಭಿವೃದ್ಧಿ ಭವನದ ಸಭಾಂಗಣದಲ್ಲಿ ನಡೆಯಲಿದೆ.

ಕಾರ್ಯಕ್ರಮದ ಉದ್ಘಾಟಕರಾಗಿ ಗದಗ ಜಿಲ್ಲೆ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಶ್ವವಿದ್ಯಾಲಯದ ಪ್ರಭಾರ ಕುಲಪತಿಗಳು ಮತ್ತು ಕುಲಸಚಿವ ಪ್ರೊ. ಡಾ. ಸುರೇಶ್ ವಿ. ನಾಡಗೌಡ ವಹಿಸುತ್ತಾರೆ. ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಹಣಕಾಸು ಅಧಿಕಾರಿ ಪ್ರಶಾಂತ್ ಜಿ.ಸಿ. ಉಪಸ್ಥಿತರಿರಲಿದ್ದಾರೆ.

ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಮೋಹನ್ ಕುಮಾರ್ ಎಂ. (General Studies and History, ಕರ್ನಾಟಕ ಸ್ಪರ್ಧಾ ಅಕಾಡೆಮಿ, ಶಿವಮೊಗ್ಗ), ಮುರ್ತುಜಾ ಖಾದ್ರಿ (ಜಿಲ್ಲಾ ಉಪ ಪೊಲೀಸ್ ವರಿಷ್ಠಾಧಿಕಾರಿ), ಕಾವ್ಯ ಅನಂತ್ (ಡಿಎಚ್ ಆಯ್ ಸ್ಪರ್ಧಾತ್ಮಕ ಪರೀಕ್ಷಾ ಅಕಾಡೆಮಿ, ಬೆಂಗಳೂರು, ಕ್ಲಿನಿಕಲ್ ಸೈಕಾಲಜಿಸ್ಟ್) ಮಲ್ಲಿಕಾರ್ಜುನ ಎಚ್. ಪಾಲ್ಗೊಳ್ಳಲಿದ್ದಾರೆ.

ಈ ಕಾರ್ಯಾಗಾರದಲ್ಲಿ UPSC, KPSC, ಪೊಲೀಸ್ ಮತ್ತು ಬ್ಯಾಂಕಿಂಗ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತಾದ ಮಾರ್ಗದರ್ಶನ ನೀಡಲಾಗುವುದು.

ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಪ್ರಕಟಣೆಯಲ್ಲಿ ಸೂಚಿಸಲಾಗಿದೆ.

# ಲಕ್ಷ್ಮೇಶ್ವರದ ಡಾ. ಸಂಗಮೇಶ ತಮ್ಮನಗೌಡ್ರ 104ನೇ ಕೃತಿ "ಮಾತು-ಮುತ್ತು" ಬಿಡುಗಡೆ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಾಹಿತ್ಯ ಕ್ಷೇತ್ರದಲ್ಲಿ ವಿಶಿಷ್ಟ ಕೊಡುಗೆ ನೀಡುತ್ತಿರುವ ಲಕ್ಷ್ಮೇಶ್ವರದ ಖ್ಯಾತ ಸಾಹಿತಿ ಹಾಗೂ ಶಿರಹಟ್ಟಿ ತಾಲೂಕಿನ ಕಡಕೋಳ ಕರ್ನಾಟಕ ಪಬ್ಲಿಕ್ ಸ್ಕೂಲ್ ಪ್ರಾಥಮಿಕ ವಿಭಾಗದ ಹಿರಿಯ ಮುಖ್ಯ ಶಿಕ್ಷಕರಾಗಿರುವ ಡಾ. ಸಂಗಮೇಶ ತಮ್ಮನಗೌಡ್ರ ಅವರ 104ನೇ ಕೃತಿ "ಮಾತು-ಮುತ್ತು (ಭಾಗ-1)" ಬೆಂಗಳೂರಿನ ಗಾಂಧಿ ಭವನದ ಕಸ್ತೂರಬಾ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಅನಾವರಣಗೊಂಡಿತು.

"ಗಳಗನಾಥ ಅಕ್ಷರಶ್ರೀ ಪುರಸ್ಕಾರ" ಸ್ವೀಕಾರ ಕಾರ್ಯಕ್ರಮದ ಅಂಗವಾಗಿ ನಡೆದ ಈ ಕೃತಿ ಬಿಡುಗಡೆಯನ್ನು ಹಿರಿಯ ಸಾಹಿತಿ ಡಾ. ಭೈರಮಂಗಲ ರಾಮೇಗೌಡ ನೆರವೇರಿಸಿದರು. ಕೃತಿಯಲ್ಲಿ ಒಟ್ಟು 204 ಚಿಂತನಾತ್ಮಕ ನುಡಿಮುತ್ತುಗಳು ಸೇರಿದ್ದು, ಲೇಖಕರ ವೈಚಾರಿಕ ಸಾಮರ್ಥ್ಯವನ್ನು ಮೆರೆದಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿ.ಎಂ.ಶ್ರೀ ಪ್ರತಿಷ್ಠಾನದ ಅಧ್ಯಕ್ಷರಾದ ಡಾ. ಭೈರಮಂಗಲ ರಾಮೇಗೌಡ ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಾಹಿತಿಗಳಾದ ಡಾ. ವಿಜಯಲಕ್ಷ್ಮೀ, ಡಾ. ಜಿ. ಶಿವಣ್ಣ, ಅಕ್ಷರ ಚಪ್ಪರದ ಅಧ್ಯಕ್ಷೆ ಮಧು ಅಕ್ಷರಿ, ಸಂಸ್ಥಾಪಕರಾದ ಆರ್. ಶ್ರೀ ನಾಗೇಶ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಈ ಪುರಸ್ಕಾರವು ಪ್ರಶಸ್ತಿ ಫಲಕ ಹಾಗೂ 2,000 ನಗದು ಬಹುಮಾನವನ್ನು ಒಳಗೊಂಡಿದೆ.

# ಹಗರಿಬೊಮ್ಮನಹಳ್ಳಿಯಲ್ಲಿ ರೈತ ಸಂಘ ಬಲವರ್ಧನೆ: ಹೊಸ ಪದಾಧಿಕಾರಿಗಳ ಆಯ್ಕೆ!

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕರ್ನಾಟಕ ರಾಜ್ಯ ರೈತ ಸಂಘದ ಹಗರಿಬೊಮ್ಮನಹಳ್ಳಿ ತಾಲೂಕು ನೂತನ ಪದಾಧಿಕಾರಿಗಳ ಸಮಿತಿಯನ್ನು ರಚಿಸಲಾಯಿತು.

ರಾಜ್ಯ ಕಾರ್ಯಾಧ್ಯಕ್ಷರಾದ ಜೆ.ಎಂ. ವೀರಸಂಗಯ್ಯ, ರಾಜ್ಯ ಸಂಘಟನಾ ಕಾರ್ಯದರ್ಶಿ ಬಿ. ಗೋಣಿ ಬಸಪ್ಪ, ಜಿಲ್ಲಾ ಸಲಹಾ ಸಮಿತಿ ಸದಸ್ಯ ಬಿ. ಸಿದ್ದನಗೌಡ, ವಿಜಯನಗರ ಜಿಲ್ಲಾ ಅಧ್ಯಕ್ಷ ಎ. ಆಂಜನೇಯಲು ರೆಡ್ಡಿ ಹಾಗೂ ಜಿಲ್ಲಾ ಯುವ ಘಟಕದ ಅಧ್ಯಕ್ಷ ರವಿಕುಮಾರ್ ತಂಬ್ರಹಳ್ಳಿ ಅವರ ನೇತೃತ್ವದಲ್ಲಿ ಸಮಿತಿ ರಚನೆ ನಡೆಯಿತು.

ತಾಲೂಕು ಸಮಿತಿಯ ಗೌರವಾಧ್ಯಕ್ಷರಾಗಿ ವಿ. ನಾಗೇಂದ್ರಪ್ಪ, ತಾಲೂಕು ಅಧ್ಯಕ್ಷರಾಗಿ ಬಸವನಗೌಡ್ರು, ಕಾರ್ಯಾಧ್ಯಕ್ಷರಾಗಿ ಮುಗಲಿ ನಾಗೇಂದ್ರಪ್ಪ, ಪ್ರಧಾನ ಕಾರ್ಯದರ್ಶಿಯಾಗಿ ಎ. ನಾಗರಾಜ್ ಆಯ್ಕೆಯಾಗಿದ್ದಾರೆ.



ಉಪಾಧ್ಯಕ್ಷರಾಗಿ ಗವಿಸಿದ್ದಪ್ಪ, ಗಡ್ಡಿ ನಿಂಗಪ್ಪ, ಸೋಗಿ ಬಸವರಾಜ್, ಎ.ಎಂ. ಕೊಟ್ರೇಶ್ ಹಾಗೂ ಸೇವಾ ನಾಯಕರಾಗಿ ನೇಮಕಗೊಂಡಿದ್ದಾರೆ.

ಸಹ ಕಾರ್ಯದರ್ಶಿಗಳಾಗಿ ಬಿ. ಯಮುನೂರಪ್ಪ, ಮಂಜಪ್ಪ, ನಶಪುಡಿ ನಾಗರಾಜ್, ಸಂಚಾಲಕರಾಗಿ ಬಿ. ಕರಿಬಸಪ್ಪ ಮತ್ತು ಇಮಾಮ್ ಸಾಬ್ ಕಾರ್ಯನಿರ್ವಹಿಸಲಿದ್ದಾರೆ. ಸಲಹಾ ಸಮಿತಿ ಸದಸ್ಯರಾಗಿ ಹರಟೆ ಕಾಳಪ್ಪ, ಉಪ್ಪರ್ ಬಸಪ್ಪ, ವಸಂತ್ ಕುಮಾರ್, ಶಿವಣ್ಣ, ಹಲಗೇರಿ ಮಹೇಶ್, ಕಿತ್ತೂರ್ ನಾಗಪ್ಪ ಹಾಗೂ ಅರವಳ್ಳಿ ನಾಗರಾಜ್ ಆಯ್ಕೆಯಾಗಿದ್ದಾರೆ.

ಇದಲ್ಲದೆ, ತಾಲೂಕು ಯುವ ಘಟಕದ ನೂತನ ಪದಾಧಿಕಾರಿಗಳನ್ನೂ ಆಯ್ಕೆ ಮಾಡಲಾಗಿದ್ದು, ಗೌರವಾಧ್ಯಕ್ಷರಾಗಿ ಕುರಿ ನಾಗೇಂದ್ರ, ತಾಲೂಕು ಅಧ್ಯಕ್ಷರಾಗಿ ಆನಂದ್, ಕಾರ್ಯಾಧ್ಯಕ್ಷರಾಗಿ ಸಂತೋಷ್ ನೇಮಕಗೊಂಡಿದ್ದಾರೆ.

ಉಪಾಧ್ಯಕ್ಷರಾಗಿ ಜೆ.ಎಂ. ಪ್ರತಾಪ್ ಸಿಂಹ, ಸಂಘಟನಾ ಕಾರ್ಯದರ್ಶಿಗಳಾಗಿ ರಮಾನಾಯ್ಕ್ ಮತ್ತು ಹನುಮಂತಪ್ಪ, ಸಹ ಕಾರ್ಯದರ್ಶಿಗಳಾಗಿ ಕಲೀಲ್ ಭಾಷ ಮತ್ತು ಹುಳ್ಳಿ ದೇವೇಂದ್ರ, ಸಂಚಾಲಕರಾಗಿ ಎ. ಹನುಮಂತ ಆಯ್ಕೆಯಾಗಿದ್ದಾರೆ.

"ರೈತರ ಹಿತಾಸಕ್ತಿಗಾಗಿ ಸಂಘವನ್ನು ಮತ್ತಷ್ಟು ಬಲಪಡಿಸಲು ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು."
**– ಬಸವನಗೌಡ್ರ.**

## ಸಿಸಿ ಕ್ಯಾಮರಾ ಕಣ್ಗಾವಲಿನಲ್ಲಿ ಇಂದು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಆರಂಭ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನಲ್ಲಿ ಇಂದು ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಆರಂಭವಾಗುತ್ತಿದ್ದು, ಎಲ್ಲಾ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಪ್ರಭಾರಿ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್. ಪ್ರಭಾಕರ ತಿಳಿಸಿದ್ದಾರೆ.

ಪಟ್ಟಣದಲ್ಲಿ ನಾಲ್ಕು ಪ್ರಮುಖ ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದ್ದು, ಉಳಿದ ಎಂಟು ಕೇಂದ್ರಗಳು ಗ್ರಾಮೀಣ ಪ್ರದೇಶಗಳಲ್ಲಿ ವ್ಯವಸ್ಥೆ ಮಾಡಲಾಗಿದೆ.

ಪ್ರತಿ ಪರೀಕ್ಷಾ ಕೇಂದ್ರದಲ್ಲೂ ಮುಖ್ಯ ಅಧೀಕ್ಷಕರು, ಉಪ ಅಧೀಕ್ಷಕರು ಹಾಗೂ ಕಸ್ಟೋಡಿಯನ್‌ಗಳನ್ನು ನೇಮಕ ಮಾಡಲಾಗಿದೆ. ಪರೀಕ್ಷಾ ಅವಧಿಯಲ್ಲಿ ಮೊಬೈಲ್ ಬಳಕೆ ಸಂಪೂರ್ಣ ನಿಷೇಧಿಸಲಾಗಿದೆ. ನಕಲು ತಡೆಯಲು ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ.

ಸುರಕ್ಷತೆಗಾಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳಿಗೆ ಕುಡಿಯುವ ನೀರು, ಆಸನ ವ್ಯವಸ್ಥೆ ಹಾಗೂ ಶೌಚಾಲಯ ಸೇರಿದಂತೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ.

### ಗ್ರಾಮ ಮಟ್ಟದಲ್ಲಿ ಕ್ರೀಡಾಕೂಟಗಳು ಹೆಚ್ಚಿದರೆ ಯುವಕರಿಗೆ ಹೆಚ್ಚು ಅವಕಾಶ –ಮಿಥುನ್ ಪಾಟೀಲ್

# ಗ್ರಾಮೀಣ ಕ್ರೀಡಾ ಪ್ರತಿಭೆಗೆ ಪ್ರೋತ್ಸಾಹ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಗ್ರಾಮೀಣ ಪ್ರದೇಶಗಳ ಯುವಕರಲ್ಲಿ ಅಡಗಿರುವ ಕ್ರೀಡಾ ಪ್ರತಿಭೆ ಹೊರಹೊಮ್ಮಲು ಹೆಚ್ಚಿನ ಪ್ರೋತ್ಸಾಹ ಅಗತ್ಯವಿದೆ ಎಂದು ರೋಣ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ್ ಪಾಟೀಲ್ ಹೇಳಿದರು.

ತಾಲೂಕಿನ ಕೊಡಗಾನೂರ ಗ್ರಾಮದ ವೀರಭದ್ರೇಶ್ವರ ಕ್ರೀಡಾ ಸಂಸ್ಥೆ ವತಿಯಿಂದ ಆಯೋಜಿಸಿದ್ದ ಕೊಡಗಾನೂರ ಪ್ರೀಮಿಯರ್ ಲೀಗ್ ಸೀಸನ್–4 ಕ್ರಿಕೆಟ್ ಪಂದ್ಯಾವಳಿಯ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಯುವಕರಲ್ಲಿ ಅಪಾರ ಪ್ರತಿಭೆ ಇದ್ದರೂ ಸೂಕ್ತ ಅವಕಾಶಗಳ ಕೊರತೆಯಿಂದ ಅದು ಬೆಳಕಿಗೆ ಬರುವುದಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು. ಗ್ರಾಮ ಮಟ್ಟದಲ್ಲಿ ಕ್ರೀಡಾಕೂಟಗಳನ್ನು ಆಯೋಜಿಸುವ ಮೂಲಕ ಯುವಕರಿಗೆ ವೇದಿಕೆ ಕಲ್ಪಿಸುವುದು ಅಗತ್ಯ ಎಂದು ಹೇಳಿದರು.

ಕ್ರೀಡೆಗಳು ಕೇವಲ ಮನರಂಜನೆಗೆ ಮಾತ್ರ ಸೀಮಿತವಾಗಿಲ್ಲ, ಅವು ಯುವಕರಲ್ಲಿ ಶಿಸ್ತು, ಆತ್ಮವಿಶ್ವಾಸ, ತಂಡದ ಮನೋಭಾವ ಮತ್ತು ನಾಯಕತ್ವ ಗುಣಗಳನ್ನು ಬೆಳೆಸುವ ಪ್ರಮುಖ ಸಾಧನಗಳಾಗಿವೆ. ಗ್ರಾಮೀಣ ಪ್ರದೇಶಗಳಲ್ಲಿ ಸೂಕ್ತ ತರಬೇತಿ, ಕ್ರೀಡಾಂಗಣ ಹಾಗೂ ಮೂಲಸೌಕರ್ಯಗಳ ಕೊರತೆ ಇರುವುದರಿಂದ ಅನೇಕ ಪ್ರತಿಭೆಗಳು ಮಂಕಾಗುತ್ತಿವೆ. ಸರ್ಕಾರ ಹಾಗೂ ಸ್ಥಳೀಯ ಸಂಸ್ಥೆಗಳು ಕ್ರೀಡಾ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಿದರೆ ಗ್ರಾಮೀಣ ಕ್ರೀಡಾಪಟುಗಳಿಗೆ ಉತ್ತಮ ಅವಕಾಶಗಳು ಲಭ್ಯವಾಗುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ರಾಜು ಸಾಂಗ್ಲಿಕರ ಮಾತನಾಡಿ, ಯುವಕರು ಕ್ರೀಡೆಗಳ ಜೊತೆಗೆ ಶಿಕ್ಷಣಕ್ಕೂ ಸಮಾನ ಮಹತ್ವ ನೀಡಬೇಕು ಎಂದರು. ಸೋಲು–ಗೆಲುವು ಕ್ರೀಡೆಯ ಅವಿಭಾಜ್ಯ ಅಂಗವಾಗಿದ್ದು, ಕ್ರೀಡಾಸ್ಫೂರ್ತಿಯಿಂದ ಆಟವಾಡಿ ಜೀವನದಲ್ಲಿ ಸಾಧನೆ ಸಾಧಿಸಲು ಮುಂದಾಗಬೇಕು ಎಂದು ಕರೆ ನೀಡಿದರು. ಗ್ರಾಮ ಮಟ್ಟದಲ್ಲಿ ಇಂತಹ ಕ್ರೀಡಾಕೂಟಗಳು ಯುವಕರಲ್ಲಿ ಒಗ್ಗಟ್ಟು ಮತ್ತು ಕ್ರೀಡೆಗಳ ಬಗ್ಗೆ ಆಸಕ್ತಿ ಹೆಚ್ಚಿಸುತ್ತವೆ ಎಂದು ಹೇಳಿದರು.

> "ಗ್ರಾಮೀಣ ಪ್ರದೇಶಗಳಲ್ಲಿ ಅಡಗಿರುವ ಪ್ರತಿಭೆ ಹೊರಹೊಮ್ಮಲು ಕ್ರೀಡೆಗಳಿಗೆ ಹೆಚ್ಚಿನ ಪ್ರೋತ್ಸಾಹ ಮತ್ತು ಮೂಲಸೌಕರ್ಯ ಅಗತ್ಯ".
> – **ಮಿಥುನ್ ಪಾಟೀಲ್**, ಅಧ್ಯಕ್ಷರು, ರೋಣ ತಾಲೂಕು ಗ್ಯಾರಂಟಿ ಸಮಿತಿ.

ನಿವೃತ್ತ ಪ್ರಾಥಮಿಕ ಶಿಕ್ಷಕ ಆರ್. ನಾರಾಯಣರಾವ್ ಜೋಶಿ ಮಾತನಾಡಿ, ಕ್ರೀಡೆಗಳು ಯುವಕರ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರು, ಗ್ರಾಮ ಪಂಚಾಯಿತಿ ಪ್ರತಿನಿಧಿಗಳು, ಭಾರತೀಯ ಸೇನೆ ಮತ್ತು ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವವರ ಕುಟುಂಬಸ್ಥರು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದವರನ್ನು ವೀರಭದ್ರೇಶ್ವರ ಕ್ರೀಡಾ ಸಂಸ್ಥೆ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಚಂದ್ರಶೇಖರಯ್ಯ ಹಿರೇಮಠ, ಬಸಯ್ಯ ಕಪ್ಲಿಮಠ, ಬಾಲಚಂದ್ರ ವಾಲ್ಮೀಕಿ, ಅರಿಹಂತ ಬಾಗಮಾರ, ಭೀಮಣ್ಣ ತಳವಾರ, ಹನಮಂತ ರಾಮಜಿ, ಮಾಂತಯ್ಯ ಕಪ್ಲಿಮಠ, ರಾಚಯ್ಯ ಬಾಳಿಕಾಯಿಮಠ, ನಿರ್ಮಲಾ ಸೊಲಬಗೌಡ್ರ, ಅಕ್ಕಮಹಾದೇವಿ ವಾಲ್ಮೀಕಿ, ಭರಮಪ್ಪ ಹುಣಸಿಗಿಡದ, ಕುಮಾರ ರಾಠೋಡ, ಬಸುವರಾಜ ನಡಕಟ್ಟಿನ, ಶರಣಪ್ಪ ಮಾಳವತ್ತ, ಪ್ರಶಾಂತ ಗಾಳಪೂಜಮಠ, ಆನಂದ ಮಾಳವತ್ತ, ರಾಜು ನದಾಫ, ರಮೇಶ ರಾಮಜಿ, ಶರಣಪ್ಪ ಹೂಗಾರ, ರಮೇಶ ರಾಠೋಡ ಸೇರಿದಂತೆ ಹಲವರು ಹಾಗೂ ಕ್ರೀಡಾಪಟುಗಳು ಉಪಸ್ಥಿತರಿದ್ದರು.

### ಶಾಲೆಯ ಕಾರ್ಯನಿರ್ವಹಣೆ, ಸೌಲಭ್ಯ ಮತ್ತು ಆಹಾರ ಸೇವೆಗಳ ಪರಿಶೀಲನೆ

# ಚನ್ನಮ್ಮ ವಸತಿ ಶಾಲೆಗೆ ಮಾನವ ಹಕ್ಕು ಆಯೋಗದ ವಿಶೇಷ ಭೇಟಿ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ನ್ಯಾಯಾಂಗ ಸದಸ್ಯ ಎಸ್.ಕೆ. ವಂಟಿಗೊಡಿ ಅವರು, ಶಿರಹಟ್ಟಿ ತಾಲ್ಲೂಕಿನ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಗೆ ಭೇಟಿ ನೀಡಿ, ವಿದ್ಯಾರ್ಥಿ ಸೌಲಭ್ಯಗಳು ಮತ್ತು ಆಹಾರ ಸೇವೆಗಳ ಸಮಗ್ರ ಪರಿಶೀಲನೆ ನಡೆಸಿದರು.

"ವಿದ್ಯಾರ್ಥಿಗಳಿಗೆ ಶುದ್ಧ, ರುಚಿಕರ ಹಾಗೂ ಪೌಷ್ಟಿಕ ಆಹಾರ ನೀಡಲಾಗಬೇಕು; ಊಟದ ತೊಂದರೆಗಳು ಮರುಕಳಿಸಬಾರದು" ಎಂದು ಅವರು ಕಟ್ಟುನಿಟ್ಟಾಗಿ ಸೂಚಿಸಿದರು.

ಅವರು ಪ್ರತಿ ಕೊಠಡಿಗೆ ಭೇಟಿ ನೀಡಿ, ಫ್ಯಾನ್, ಲೈಟ್, ಶೌಚಾಲಯದ ಸ್ವಚ್ಛತೆ ಮತ್ತು ಬಿಸಿನೀರಿನ ವ್ಯವಸ್ಥೆ ಪರಿಶೀಲಿಸಿದರು. ಗೀಸರ್ ಅಳವಡಿಸಲು ಸೂಚನೆ ನೀಡಿದ ಅವರು, ವಿದ್ಯಾರ್ಥಿಗಳಿಗೆ ಕಾಲಕಾಲಕ್ಕೆ ವಿಟಮಿನ್–ಸಿ ಮತ್ತು ಕ್ಯಾಲ್ಸಿಯಂ ಮಾತ್ರೆಗಳು ನೀಡಲಾಗುತ್ತಿದೆಯೇ ಎಂಬುದನ್ನೂ ಖಚಿತಪಡಿಸಿದರು.

ವಿದ್ಯುತ್ ವ್ಯತ್ಯಯದ ಸಂದರ್ಭ ಯುಪಿಎಸ್ ಮತ್ತು ಜನರೇಟರ್ ಬಳಕೆಯ ಮಾಹಿತಿ ಪಡೆದು, ಶಾಲೆ ಆವರಣವನ್ನು ಸುಂದರಗೊಳಿಸಲು ಸಿಮೆಂಟ್ ಬೆಂಚುಗಳು, ಗಿಡ ನೆಡುವಂತೆ ಹಾಗೂ ಸಿ.ಸಿ. ಕ್ಯಾಮರಾ ಮೂಲಕ ಸುರಕ್ಷತೆ ವೀಕ್ಷಣೆ ಕ್ರಮಗಳನ್ನೂ ನಿರ್ದೇಶಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ನಂದಾ ಹಣಬರಟ್ಟಿ, ಶಿರಹಟ್ಟಿ ತಹಶೀಲ್ದಾರ್ ರಾಘವೇಂದ್ರ ರಾವ್, ಪಿ.ಎಸ್.ಐ ಆಯ್.ಆರ್. ರೀತ್ತಿ, ಇ.ಓ ರಾಮಣ್ಣ ದೊಡ್ಮನಿ, ಬಿ.ಇ.ಓ ನಾಣ್ಕಿ ನಾಯಕ, ಸಹಾಯಕ ನಿರ್ದೇಶಕ ಗೋಪಾಲ ಲಮಾಣಿ, ಪ್ರಾಂಶುಪಾಲರು ಶ್ರೀಮತಿ ಸುನೀತಾ ವಾಲಿಶೆಟ್ಟರ್ ಸೇರಿದಂತೆ ಎಲ್ಲಾ ವಸತಿ ಶಾಲೆಯ ಸಿಬ್ಬಂದಿಗಳು ಹಾಜರಿದ್ದರು.

## ನಾಳೆ ತೋಂಟದಾರ್ಯ ಮಠದಲ್ಲಿ ತೇರಿನ ಗಾಲಿ ಪೂಜೆ

■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ ಐತಿಹಾಸಿಕ ಮಹತ್ವ ಹೊಂದಿರುವ ಶ್ರೀ ಜಗದ್ಗುರು ತೋಂಟದಾರ್ಯ ಮಠದಲ್ಲಿ ಜಾತ್ರಾ ಮಹೋತ್ಸವದ ಅಂಗವಾಗಿ ತೇರಿನ ಗಾಲಿ ಪೂಜಾ ಕಾರ್ಯಕ್ರಮ ಮಾ.19ರಂದು ಗುರುವಾರ ಸಂಜೆ 6 ಗಂಟೆಗೆ ನೆರವೇರಲಿದೆ.

ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರ ಸನ್ನಿಧಿಯಲ್ಲಿ ನಡೆಯಲಿರುವ ಈ ಪೂಜಾ ಕಾರ್ಯಕ್ರಮದಲ್ಲಿ ಶ್ರೀ ಸ್ವಾಮಿ ಸಿದ್ಧಲಿಂಗೇಶ್ವರರ ಭಕ್ತರು, ಶ್ರೀಮಠದ ಅಭಿಮಾನಿಗಳು ಹಾಗೂ ಜಾತ್ರಾ ಸಮಿತಿಯ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ.

ಇದಲ್ಲದೆ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರು ಹಾಗೂ ಸದಸ್ಯರು, ಬಸವದಳ, ಬಸವ ಕೇಂದ್ರ ಮತ್ತು ಸರ್ವ ಸದ್ಭಕ್ತ ಮಹಾಜನತೆ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಜಾತ್ರಾ ಸಮಿತಿ ಅಧ್ಯಕ್ಷ ವಿನಾಯಕ ಮಾನ್ವಿ ಮನವಿ ಮಾಡಿದ್ದಾರೆ.

## ಪೂರ್ವಭಾವಿ ಸಭೆ ಮುಂದೂಡಿಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 5ರಂದು ಹಸಿರು ಕ್ರಾಂತಿ ಹರಿಕಾರ ಡಾ. ಬಾಬು ಜಗಜೀವನರಾಮ್ ಅವರ 119ನೇ ಹಾಗೂ ಎಪ್ರಿಲ್ 14ರಂದು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ನಿಗದಿಯಾಗಿದ್ದ ಪೂರ್ವಭಾವಿ ಸಭೆಯನ್ನು ಕಾರಣಾಂತರಗಳ ಹಿನ್ನೆಲೆಯಲ್ಲಿ ಮುಂದೂಡಲಾಗಿದೆ.

ಮೂಲ ನಿಗದಿಪಡಿಸಿದ ದಿನಾಂಕ ಮಾರ್ಚ್ 17, ಮಧ್ಯಾಹ್ನ 3 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಆಡಿಟೋರಿಯಂ ಹಾಲ್‌ನಲ್ಲಿ ನಡೆಯಬೇಕಾದ ಸಭೆಯನ್ನು ಈಗ ಮಾರ್ಚ್ 20, ಬೆಳಿಗ್ಗೆ 11 ಗಂಟೆಗೆ ಮರುನಿಗದಿಪಡಿಸಲಾಗಿದೆ.

ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮುಖಂಡರು, ಸಾರ್ವಜನಿಕರು ಮತ್ತು ಎಲ್ಲಾ ಸಮುದಾಯಗಳ ಪ್ರತಿನಿಧಿಗಳು ಸಭೆಗೆ ಸಕಾಲಕ್ಕೆ ಹಾಜರಾಗಿ ತಮ್ಮ ಸಲಹೆ ಮತ್ತು ಸೂಚನೆಗಳನ್ನು ನೀಡಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 300 ಬಡ ಕುಟುಂಬಗಳಿಗೆ ಆಹಾರ ಕಿಟ್ ವಿತರಿಸಿದ ಇಮಾಮಸಾಬ ಶೇಖ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಯುಗಾದಿ ಹಾಗೂ ರಂಜಾನ ಹಬ್ಬದ ಸಂಭ್ರಮದ ಸಂದರ್ಭದಲ್ಲಿ ಪಟ್ಟಣ ಪಂಚಾಯತಿ ಸ್ಥಾಯಿ ಸಮಿತಿಯ ಮಾಜಿ ಅಧ್ಯಕ್ಷ ಇಮಾಮಸಾಬ ಶೇಖ ಅವರು ಬಡ ಕುಟುಂಬಗಳಿಗೆ ಆಹಾರ ಕಿಟ್ ಹಾಗೂ ಸೀರೆಯನ್ನು ವಿತರಿಸಿದರು.

ಈ ಕಾರ್ಯಕ್ರಮದಲ್ಲಿ ಸುಮಾರು 300 ಕುಟುಂಬಗಳಿಗೆ ಕಿಟ್ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಇಮಾಮಸಾಬ ಶೇಖ, ರಂಜಾನ ಹಬ್ಬದ ಮಹತ್ವವನ್ನು ಮತ್ತು ದಾನಧರ್ಮದ ಮೌಲ್ಯವನ್ನು ಹಂಚಿಕೊಂಡು, "ಹಬ್ಬದ ಸಂತೋಷವನ್ನು ನಮ್ಮ ಮನೆಯಲ್ಲಿ ಮಾತ್ರವಲ್ಲ, ಬಡ ಕುಟುಂಬಗಳ ಮನೆಗಳಲ್ಲಿ ಕೂಡ ಹಂಚಿ, ಸಮಾಜದಲ್ಲಿ ಸಂಭ್ರಮವನ್ನು ಮೂಡಿಸುವುದು ನಮ್ಮ ಕರ್ತವ್ಯ" ಎಂದರು.

ಸುಮಾರು 8 ವರ್ಷಗಳಿಂದ ಈ ಸೇವಾ ಕಾರ್ಯವನ್ನು ನಿರಂತರವಾಗಿ ನಡೆಸಿಕೊಂಡು ಬಂದಿರುವುದಾಗಿ ತಿಳಿಸಿದರು.

ಮುಳಗುಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ವಿ. ಸುಂಕಾಪೂರ್ ಮಾತನಾಡಿ, "ಇಮಾಮಸಾಬ ಶೇಖ ಪ್ರತಿ ವರ್ಷ ಬಡವರಿಗಾಗಿ ಆಹಾರ ಕಿಟ್ ವಿತರಿಸುತ್ತಿರುವ ಮೂಲಕ ಮಾನವೀಯತೆ ಮತ್ತು ಸಾಮಾಜಿಕ ಸೇವೆಯನ್ನು ಮೆರೆದಿದ್ದಾರೆ. ಇಂತಹ ಕಾರ್ಯಗಳು ಸಮಾಜದಲ್ಲಿ ಪ್ರೇರಣೆಯನ್ನು ಹುಟ್ಟು ಹಾಕುತ್ತವೆ" ಎಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಎಸ್.ಸಿ. ಬಡ್ನಿ, ಅಶೋಕ ಸೋನಗೋಜಿ, ನಾಗಪ್ಪ ನೀಲಗುಂದ, ಹೊನ್ನಪ್ಪ ನೀಲಗುಂದ, ಮಹ್ಮದ ಕೈಫ್ ಶೇಖ, ಇರ್ಫಾನ್ ಸುಂಕದ, ಮುಸ್ತಾಕ್ ಅಹ್ಮದ ಅಕ್ಕಿ, ಗಂಗಪ್ಪ ಸುಂಕಾಪೂರ, ಹುಸೇನಸಾಬ ಕಲೇಗಾರ, ಇಸ್ಮಾಯಿಲ್ ಸುಂಕದ, ದಾದಾಖಲಂದರ ಮುಜಾವರ, ದಾವಲಸಾಬ ರಮಗೇರಿ ಹಾಜರಿದ್ದರು.

### ಗ್ರಾಮೀಣ ಮತ್ತು ನಗರ ಬಡವರ್ಗಗಳ ಶ್ರಮ ಯೋಗಿ ಸಬಲೀಕರಣ

# ಪಿಎಮ್–ಎಸ್‌ವೈಎಂ ನೋಂದಣಿ ಮೇಳ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗ್ರಾಮೀಣ ಮತ್ತು ನಗರ ಪ್ರದೇಶದ ಬಡ ಕುಟುಂಬಗಳು, ವಿಶೇಷವಾಗಿ ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಉತ್ತೇಜನ ಮತ್ತು ಸುಸ್ಥಿರ ಜೀವನೋಪಾಯದ ಅವಕಾಶಗಳನ್ನು ಒದಗಿಸುವುದೇ ಗದಗ ಜಿಲ್ಲಾ ಲೀಡ್ ಬ್ಯಾಂಕ್ ನ ಮುಖ್ಯ ಉದ್ದೇಶವಾಗಿದೆ ಎಂದು ಬ್ಯಾಂಕ್‌ನ ವ್ಯವಸ್ಥಾಪಕ ಸಂತೋಷ್ ಹೇಳಿದರು.

ಮಂಗಳವಾರ ನರೇಗಲ್ಲ ಪಟ್ಟಣ ಪಂಚಾಯಿತಿ ಸಭಾ ಭವನದಲ್ಲಿ ಆಯೋಜಿಸಲಾದ ಪ್ರಧಾನಿ ಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ ನಿಧಿ (PM SVYM) ಕಾರ್ಯಕ್ರಮದ ವಿಶೇಷ ನೋಂದಣಿ ಮೇಳದಲ್ಲಿ ಮಾತನಾಡಿದ ಅವರು, ಅಸಂಘಟಿತ ವಲಯದ ಕಾರ್ಮಿಕರಿಗೆ ವಯೋವೃದ್ಧಿಯಲ್ಲಿ ಸುರಕ್ಷತೆ ಕಲ್ಪಿಸಲು ಭಾರತ ಸರ್ಕಾರವು ಪ್ರಧಾನಿ ಮಂತ್ರಿ ಶ್ರಮ್ ಯೋಗಿ ಮಾನ್ ಧನ್ (PM-SYM) ಯೋಜನೆಯನ್ನು ಜಾರಿಗೆ ತಂದಿದೆ. ದೇಶದ ಒಟ್ಟು ಆದಾಯದ ಅರ್ಧಕ್ಕಿಂತ ಹೆಚ್ಚನ್ನು ಅಸಂಘಟಿತ ವಲಯದ 42 ಕೋಟಿ ಕಾರ್ಮಿಕರು ಉತ್ಪಾದಿಸುತ್ತಿರುವುದು ವಿಶೇಷ. ಅವರ ಶ್ರೇಯೋಭಿವೃದ್ಧಿಗಾಗಿ ಹಲವು ಹಂತದ ಯೋಜನೆಗಳು ಸರ್ಕಾರದಿಂದ ಅನುಷ್ಠಾನಗೊಳಿಸಲ್ಪಟ್ಟಿವೆ, ಮತ್ತು ಅರ್ಹ ಫಲಾನುಭವಿಗಳು ಅವುಗಳನ್ನು ಪಡೆಯಬೇಕು ಎಂದು ಹೇಳಿದರು.

ಜಿಲ್ಲಾ ಮುಖ್ಯಾಧಿಕಾರಿ ಮಲ್ಲೇಶ ಪಚ್ಚಿ ಮಾತನಾಡಿ, ಬೀದಿ ಬದಿ ವ್ಯಾಪಾರಸ್ಥರಿಗೆ ಮತ್ತು ಅಸಂಘಟಿತ ಕಾರ್ಮಿಕರಿಗೆ ಉದ್ಯೋಗ ತರಬೇತಿ ನೀಡುವುದರ ಮೂಲಕ ಬಡತನ ನಿರ್ಮೂಲನೆ ಮಾಡುವುದು ರಾಷ್ಟ್ರೀಯ ಜೀವನೋಪಾಯ ಅಭಿಯಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಸಮುದಾಯ ಸಂಘಟಕ ವಿ.ವೈ. ಮಡಿವಾಳ, ಕಂದಾಯ ನಿರೀಕ್ಷಕ ಎಂ.ಎಚ್. ಸಿತೀಮನಿ, ಜಿಲ್ಲಾ ಬೀದಿ ಬದಿ ವ್ಯಾಪಾರಸ್ಥರ ಸಂಘದ ಕಾರ್ಯದರ್ಶಿ ಅನ್ವರ ಶಿರಹಟ್ಟಿ, ಸೇಂಟ್ರಲ್ ಬ್ಯಾಂಕ್ ವ್ಯವಸ್ಥಾಪಕ ನರೇಂದ್ರ, ಸಮುದಾಯ ಸಂಘಟನಾಧಿಕಾರಿ ಎ.ಎಸ್. ಸಂಕನಗೌಡ್ರ, ರಮೇಶ್ ಹಲಗಿಯವರ, ಎ.ವಿ. ಮೆಣಸಗಿ, ಶೇಖಪ್ಪ ಹೊನ್ನವಾಡ, ಶಂಕ್ರಪ್ಪ ದೊಡ್ಡಣ್ಣವರ, ಮಹಾದೇವಪ್ಪ ಮ್ಯಾಗೇರಿ, ಶಿವಾನಂದ ಪದ್ಮಸಾಲಿ, ದ್ಯಾಮಣ್ಣ ಕಡೆತೋಟದ, ದೇವಕ್ಕ ರಾಠೋಡ, ವೀರಪ್ಪ ಹುರಕಡ್ಲಿ, ಹನಮಪ್ಪ ಚಲವಾದಿ, ಯಮನೂರಪ್ಪ ಮುದಗಲ್ಲ, ಕಲ್ಲಪ್ಪ ಬಡಿಗೇರ ಮತ್ತು ಪಟ್ಟಣ ಮಾರಾಟ ಸಮಿತಿಯ ಸದಸ್ಯರು ಹಾಗೂ ಸರ್ವ ಬೀದಿ ಬದಿ ವ್ಯಾಪಾರಸ್ಥರು ಪಾಲ್ಗೊಂಡಿದ್ದರು.

### 29,568 ವಿದ್ಯಾರ್ಥಿಗಳ ಹಾಜರಾತಿ, 105 ಕೇಂದ್ರಗಳಲ್ಲಿ ಕಟ್ಟುನಿಟ್ಟಿನ ವ್ಯವಸ್ಥೆ

# ಇಂದಿನಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ




■ವಿಜಯಸಾಕ್ಷಿ ಸುದ್ದಿ, ಧಾರವಾಡ

ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗಳು ಮಾರ್ಚ್ 18ರಿಂದ ಎಪ್ರಿಲ್ 2ರವರೆಗೆ ನಡೆಯಲಿದ್ದು, ಪ್ರತಿದಿನ ಬೆಳಿಗ್ಗೆ 10ರಿಂದ ಮಧ್ಯಾಹ್ನ 1:15ರವರೆಗೆ ಪರೀಕ್ಷೆಗಳು ಜರುಗಲಿವೆ ಎಂದು ಶಿಕ್ಷಣ ಇಲಾಖೆ ತಿಳಿಸಿದೆ.

ಜಿಲ್ಲೆಯಲ್ಲಿ ಒಟ್ಟು 105 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, 29,568 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಇವರಲ್ಲಿ 26,171 ವಿದ್ಯಾರ್ಥಿಗಳು ಹೊಸದಾಗಿ ನೋಂದಾಯಿಸಿಕೊಂಡಿದ್ದು, 960 ಮಂದಿ ಬಾಹ್ಯ ಅಭ್ಯರ್ಥಿಗಳಾಗಿದ್ದಾರೆ. ಜೊತೆಗೆ 2,295 ಪುನರಾವರ್ತಿತ ವಿದ್ಯಾರ್ಥಿಗಳು ಹಾಗೂ 142 ಪುನರಾವರ್ತಿತ ಬಾಹ್ಯ ಅಭ್ಯರ್ಥಿಗಳು ಪರೀಕ್ಷೆಗೆ ಹೆಸರು ನೋಂದಾಯಿಸಿದ್ದಾರೆ.

ಪರೀಕ್ಷೆಗಳ ಸುಗಮ ನಿರ್ವಹಣೆಗೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಎಲ್ಲಾ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಕಲಂ 144 ಅನ್ವಯ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಜೊತೆಗೆ ಕೇಂದ್ರಗಳ 200 ಮೀಟರ್ ವ್ಯಾಪ್ತಿಯಲ್ಲಿರುವ ಝುರಾ–ಕ್ಸ್ ಅಂಗಡಿಗಳನ್ನು ಮುಚ್ಚಲು ಆದೇಶಿಸಲಾಗಿದೆ.

ಜಿಲ್ಲಾ ಮಟ್ಟದಲ್ಲಿ ಜಾಗೃತ ದಳದ ಅಧಿಕಾರಿಗಳಾಗಿ ಉಪನಿರ್ದೇಶಕರು (ಆಡಳಿತ) ಹಾಗೂ ಉಪನಿರ್ದೇಶಕರು (ಅಭಿವೃದ್ಧಿ) ಅವರನ್ನು ನೇಮಕ ಮಾಡಲಾಗಿದೆ. ಪೊಲೀಸ್ ಭದ್ರತೆಗೆ ಸಂಬಂಧಿಸಿದಂತೆ ಹುಬ್ಬಳ್ಳಿ–ಧಾರವಾಡ ಮಹಾನಗರ ಪೊಲೀಸ್ ಮತ್ತು ಜಿಲ್ಲಾ ಪೊಲೀಸ್ ಇಲಾಖೆಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದೆ.

ಪರೀಕ್ಷಾ ದಿನಗಳಲ್ಲಿ ನಿರಂತರ ವಿದ್ಯುತ್ ಪೂರೈಕೆಗೆ ಹೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಿಂದ ಉಚಿತ ಬಸ್ ಪ್ರಯಾಣ ವ್ಯವಸ್ಥೆ ಕಲ್ಪಿಸಲಾಗಿದೆ.

ಇನ್ನು ಪರೀಕ್ಷೆಯ ಪಾರದರ್ಶಕತೆಗೆ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ. ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಮುಖ್ಯ ಅಧೀಕ್ಷಕರು, ಪ್ರಶ್ನೆಪತ್ರಿಕೆ ಪಾಲಕರು ಹಾಗೂ ಸ್ಥಳೀಯ ನಿರೀಕ್ಷಕರನ್ನು ನಿಯಮಾನುಸಾರ ನೇಮಕ ಮಾಡಲಾಗಿದೆ. ಪರೀಕ್ಷೆಯನ್ನು ಶಾಂತ, ಸುವ್ಯವಸ್ಥಿತ ಹಾಗೂ ಪಾರದರ್ಶಕವಾಗಿ ನಡೆಸಲು ಎಲ್ಲಾ ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾ.19ರಂದು ಪಂಚವಾರ್ಷಿಕ ನಂದಿ ಪಾಟಾರೋಹಣ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಲಿಂಬಯ್ಯಸ್ವಾಮಿಮಠದಲ್ಲಿ ಮಾ.19ರಂದು ಗುರುವಾರ ಪಂಚವಾರ್ಷಿಕ ನಂದಿ ಪಾಟಾರೋಹಣ ಸಮಾರಂಭ, ಜಂಗಮ ವಟುಗಳಿಗೆ ಅಯ್ಯಾಚಾರ ಹಾಗೂ ಹಠಯೋಗ ಸಾಧನಗಳ ಪೂಜಾಕೈಂಕರ್ಯ ಕಾರ್ಯಕ್ರಮಗಳು ನಡೆಯಲಿವೆ ಎಂದು ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ ತಿಳಿಸಿದ್ದಾರೆ.

ಪಟ್ಟಣದ ಶ್ರೀಮಠದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಲಿಂಬಯ್ಯಸ್ವಾಮಿಮಠವು 14 ತಲೆಮಾರುಗಳ ಧಾರ್ಮಿಕ ವೈಶಿಷ್ಟ್ಯತೆ ಹೊಂದಿದ್ದು, ಹಿರಿಯರ ಕಾಲದಿಂದಲೂ ಸಂಪ್ರದಾಯಬದ್ಧ ಆಚರಣೆಗಳನ್ನು ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಮುಂದುವರಿಸಿಕೊಂಡು ಬಂದಿದೆ ಎಂದರು.

ಲಿಂಬಯ್ಯಸ್ವಾಮಿ ದಂಪತಿಗಳು ಗುರುವಿನ ಅನುಗ್ರಹ ಮತ್ತು ಹಠಯೋಗದ ಮೂಲಕ ಶಿವಸಾಮಗ್ರಿಗಳನ್ನು ಪಡೆದು ಲಕ್ಷ್ಮೇಶ್ವರದಲ್ಲಿ ಶಿರಸ್ಸಪವಾಡಗೈದಿರುವುದಾಗಿ ತಿಳಿಸಿದರು. ಹಠಯೋಗ ಸಾಧನಗಳಾದ ನಂದಿಪಠ, ಗಂಡುಗತ್ತರಿ, ಬಲಮುರಿ ಶಂಖ, ಎಡಮುರಿ ಬೆತ್ತ, ಏಕಗಳಲಿನ ಬೆತ್ತ, ಚಾಪಗೋಡಲಿ ಹಾಗೂ ವೀರಕಂಕಣಗಳ ಮಹತ್ವವನ್ನು ವಿವರಿಸಿದರು. ಕಾರ್ಯಕ್ರಮದ ದಿನ ಬೆಳಿಗ್ಗೆಯಿಂದ ಸಂಜೆವರೆಗೆ ವಾದ್ಯಮೇಳದೊಂದಿಗೆ ಸಾಧನಗಳಿಗೆ ಅಭಿಷೇಕ ಮತ್ತು ಪೂಜೆ ನೆರವೇರಲಿದೆ ಎಂದರು.

ಲಕ್ಷ್ಮೇಶ್ವರ ಕರೇವಾಡಿಮಠದ ಮಳೇಮಲ್ಲಿಕಾರ್ಜುನ ಶಿವಾಚಾರ್ಯರು ಸಾನಿಧ್ಯವಹಿಸಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕೋರಿದರು.

ಈ ಸಂದರ್ಭದಲ್ಲಿ ವಿ.ಜಿ. ಪಡಗೇರಿ, ಕೃಷ್ಣ ಕುಲಕರ್ಣಿ, ಈರಣ್ಣ ಅಂಕಲಕೋಟಿ ಮಾತನಾಡಿದರು. ಚಿದಾನಂದ ಲಿಂಬಯ್ಯಸ್ವಾಮಿಮಠ, ನಿರಂಜನ ಲಿಂಬಯ್ಯಸ್ವಾಮಿಮಠ, ಶರಣಪ್ಪ ಗುಳಗಣ್ಣವರ, ಶಾಂತರಾಜ ಓದುನವರ, ರಾಮಣ್ಣ ಪಡಗೇರಿ, ಮಹೇಶ್ ಲಿಂಬಯ್ಯಸ್ವಾಮಿಮಠ ಸೇರಿದಂತೆ ಇತರರು ಉಪಸ್ಥಿತರಿದ್ದರು.



## ಎಸ್‌ಎಸ್‌ಎಲ್‌ಸಿ ಪರೀಕ್ಷೆ

# ತಾಲೂಕಿನಲ್ಲಿ 8 ಕೇಂದ್ರಗಳು-ವೆಬ್ ಕಾಸ್ಟಿಂಗ್‌ನಲ್ಲಿ ಪರೀಕ್ಷೆ



**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮಾ.18ರಿಂದ ಆರಂಭವಾಗಲಿರುವ ಎಸ್‌ಎಸ್‌ಎಲ್‌ಸಿ (10ನೇ ತರಗತಿ) ವಾರ್ಷಿಕ ಪರೀಕ್ಷೆಗೆ ತಾಲೂಕಿನಲ್ಲಿ ನಗರ ಸೇರಿದಂತೆ ವಿವಿಧ ಭಾಗಗಳಲ್ಲಿ ಒಟ್ಟು 8 ಪರೀಕ್ಷಾ ಕೇಂದ್ರಗಳನ್ನು ಗುರುತಿಸಿ ಸಮಗ್ರ ಪೂರ್ವಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಗಂಗಾಧರ ಅಣ್ಣಿಗೇರಿ ತಿಳಿಸಿದ್ದಾರೆ.

ತಾಲೂಕಿನ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳಿಂದ ಬಾಲಕಿಯರು 1,014, ಬಾಲಕರು 851 ಹಾಗೂ ಖಾಸಗಿಯಾಗಿ ನೋಂದಾಯಿತ 184 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 2,255 ಮಂದಿ ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದಾರೆ.

ವಿದ್ಯಾರ್ಥಿಗಳಿಗಾಗಿ ಮುಂಡರಗಿ ಪಟ್ಟಣದ ಜಗದ್ಗುರು ಅನ್ನದಾನೀಶ್ವರ ಪ್ರೌಢಶಾಲೆ, ಎಸ್‌ಎಫ್‌ಎಸ್ ಶಾಲೆ, ವಿ.ಜಿ. ಲಿಂಬಿಕಾಯಿ ಪ್ರೌಢಶಾಲೆ, ಡಂಬಳದ ಜಗದ್ಗುರು ತೋಂಟದಾರ್ಯ ಶಾಲೆ, ಪೇಠಾಲೂರು ಗ್ರಾಮದ ಶ್ರೀ ಹಾಲೇಶ್ವರ ಪ್ರೌಢಶಾಲೆ, ಬಾಗೇವಾಡಿ, ಕೊರ್ಲಹಳ್ಳಿ ಆದರ್ಶ ವಿದ್ಯಾಲಯ ಹಾಗೂ ಕದಾಂಪುರ ಗ್ರಾಮದ ಸರ್ಕಾರಿ ಪ್ರೌಢಶಾಲೆ ಸೇರಿ ಒಟ್ಟು 8 ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸಲಾಗಿದೆ.

"ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಧೈರ್ಯ ಮತ್ತು ಆತ್ಮವಿಶ್ವಾಸ ಬಹಳ ಮುಖ್ಯ. ಪರೀಕ್ಷೆ ಎಂದರೆ ಭಯಪಡುವ ವಿಷಯವಲ್ಲ, ಅದು ನಮ್ಮ ಜ್ಞಾನವನ್ನು ತೋರಿಸಿಕೊಳ್ಳುವ ಅವಕಾಶ. ಎಲ್ಲಾ ವಿದ್ಯಾರ್ಥಿಗಳಿಗೆ ಶುಭಾಶಯಗಳು."

**– ಗಂಗಾಧರ ಅಣ್ಣಿಗೇರಿ, ಕ್ಷೇತ್ರ ಶಿಕ್ಷಣಾಧಿಕಾರಿ.**

"ಪ್ರಿಯ ವಿದ್ಯಾರ್ಥಿಗಳೇ, ನೀವು ಇಡೀ ವರ್ಷ ಶ್ರಮಪಟ್ಟು ಓದಿದ್ದೀರಿ. ಪರೀಕ್ಷೆ ಸಮಯದಲ್ಲಿ ಭಯಪಡದೆ ಆತ್ಮವಿಶ್ವಾಸದಿಂದ ಪ್ರಶ್ನೆಗಳಿಗೆ ಉತ್ತರ ಬರೆಯಿರಿ. ಶ್ರಮ, ಧೈರ್ಯ ಮತ್ತು ಆತ್ಮವಿಶ್ವಾಸವೇ ಯಶಸ್ಸಿನ ಗುಟ್ಟು. 'Winners never quit, quitters never win' ಎಂಬ ಮಾತಿನಂತೆ ಛಲದಿಂದ ಮುನ್ನಡೆಯಿರಿ. ಉತ್ತಮ ಫಲಿತಾಂಶದೊಂದಿಗೆ ಉತ್ತೀರ್ಣರಾಗಿ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿರಿ."

**– ಆರ್.ಎಸ್. ಬುರಡಿ ಡಿಡಿಪಿಐ, ಗದಗ.**

ಪ್ರತಿ ಕೇಂದ್ರಕ್ಕೂ ಅಧೀಕ್ಷಕರನ್ನು ನೇಮಿಸಲಾಗಿದೆ. ಪರೀಕ್ಷೆಗಳು ವೆಬ್ ಕಾಸ್ಟಿಂಗ್ ಮೂಲಕ ನಡೆಯಲಿದ್ದು, ವಿದ್ಯಾರ್ಥಿಗಳಿಗೆ ಅಗತ್ಯ ಮೂಲಸೌಕರ್ಯಗಳನ್ನು ಸಿದ್ಧಪಡಿಸಲಾಗಿದೆ. ಈಗಾಗಲೇ ಎಲ್ಲಾ ಕೇಂದ್ರಗಳಿಗೆ ಭೇಟಿ ನೀಡಿ ವ್ಯವಸ್ಥೆಗಳ ಪರಿಶೀಲನೆ ನಡೆಸಿ, ಕೇಂದ್ರ ಮುಖ್ಯಸ್ಥರಿಗೆ ಅಗತ್ಯ ಸೂಚನೆಗಳನ್ನು ನೀಡಲಾಗಿದೆ ಎಂದು ಅವರು ಹೇಳಿದರು. ಜಿಲ್ಲೆಯಲ್ಲಿ ತಾಲೂಕು ಪ್ರಥಮ ಸ್ಥಾನ ಪಡೆಯುವ ವಿಶ್ವಾಸವನ್ನೂ ವ್ಯಕ್ತಪಡಿಸಿದರು.

# ಅಕಾಲಿಕ ಮಳೆಯ ಅಬ್ಬರ: ರೋಣದಲ್ಲಿ ಆಲಿಕಲ್ಲು ಮಳೆ, ಸಿಡಿಲು ಬಡಿದು ರೈತ ಸಾವು!

**■ವಿಜಯಸಾಕ್ಷಿ ಸುದ್ದಿ, ಗದಗ/ರೋಣ**

ಜಿಲ್ಲೆಯ ಹಲವೆಡೆ ಮಂಗಳವಾರ ಸಂಜೆ ಗುಡುಗು-ಸಿಡಿಲು ಸಹಿತ ಭಾರೀ ಮಳೆಯಾಗಿದ್ದು, ರೋಣ ತಾಲೂಕಿನ ವಿವಿಧ ಭಾಗಗಳಲ್ಲಿ ಆಲಿಕಲ್ಲು ಮಳೆಯೂ ಸುರಿದಿದೆ.

ಸುಮಾರು ಅರ್ಧಗಂಟೆಗೂ ಹೆಚ್ಚು ಕಾಲ ಸುರಿದ ಮಳೆಯು ಬೇಸಿಗೆ ಬಿಸಿಲಿನಿಂದ ಕಂಗೆಟ್ಟಿದ್ದ ಜನರಿಗೆ ತಂಪು ನೀಡಿದರೂ, ರೈತರಿಗೆ ಸಂಕಷ್ಟ ತಂದೊಡ್ಡಿದೆ.

ರೋಣ ಪಟ್ಟಣ ಸೇರಿದಂತೆ ಕುರಹಟ್ಟಿ, ಜಕ್ಕಲಿ, ಮಲ್ಲಾಪೂರ, ಸೂಡಿ, ಅಬ್ಬಿಗೇರಿ ಗ್ರಾಮಗಳಲ್ಲಿ ಮಳೆ ಜೋರಾಗಿ ಸುರಿಯಿತು. ಸಂಜೆ ಸುಮಾರು 4 ಗಂಟೆ ವೇಳೆಗೆ ಗಾಳಿ, ಮಿಂಚು, ಗುಡುಗು-ಸಿಡಿಲಿನೊಂದಿಗೆ ವರುಣ ಆರ್ಭಟ ಮೆರೆದಿದ್ದು, ಪರಿಣಾಮ ಎರಡು ಗಂಟೆಗಳ ಕಾಲ ವಿದ್ಯುತ್ ವ್ಯತ್ಯಯ ಉಂಟಾಯಿತು. ಭಾರೀ ಮಳೆಯಿಂದ ಚರಂಡಿ



ನೀರು ರಸ್ತೆಗಳಿಗೆ ಹರಿದುಬಂದ ಪರಿಣಾಮ ವ್ಯಾಪಾರಸ್ಥರು ಹಾಗೂ ವಾಹನ ಸವಾರರು ಪರದಾಡುವಂತಾಯಿತು. ಅಕಾಲಿಕ ಮಳೆಯಿಂದ ಜಾನುವಾರುಗಳಿಗೆ ಸಂಗ್ರಹಿಸಿದ್ದ ಹೊಟ್ಟು-ಮೇವು ನೀರು ಪಾಲಾಗಿದ್ದು, ರೈತರಿಗೆ ಮತ್ತಷ್ಟು ಸಂಕಷ್ಟ ಎದುರಾಗಿದೆ.

ಸಿಡಿಲು ಬಡಿದು ರೈತ ಸಾವು: ಜಿಲ್ಲೆಯ ರೋಣ ತಾಲೂಕಿನ ಮೆಣಸಗಿ ಗ್ರಾಮದಲ್ಲಿ ಸುರಿದ ಮಳೆಗೆ ಸಿಡಿಲು ಬಡಿದು ರೈತನೋರ್ವ ಸಾವನ್ನಪ್ಪಿದ್ದಾನೆ. ನಿಂಗಪ್ಪ ರಾಮಪ್ಪ ಅಮಾತಿ (58) ಮೃತ ದುರ್ದೈವಿ. ಮಂಗಳವಾರ ಸಂಜೆ ಸುಮಾರು 5.30ರ ವೇಳೆಗೆ ಹೊಲದಿಂದ ಮನೆಗೆ ಮರಳುವಾಗ ಬೆನ್ನಿ ಹಳ್ಳದ ಹತ್ತಿರ ಸಿಡಿಲು ಬಡಿದು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಈ ಘಟನೆ ಕುಟುಂಬವನ್ನು ಶೋಕ ಸಾಗರದಲ್ಲಿ ಮುಳುಗಿಸಿದ್ದು, ಪ್ರಕರಣ ರೋಣ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

ಮಲ್ಲಾಪೂರದಲ್ಲಿ ಆಲಿಕಲ್ಲು ಮಳೆ ಅಬ್ಬರ ರೋಣ ತಾಲೂಕಿನ ಮಲ್ಲಾಪೂರ ಗ್ರಾಮದಲ್ಲಿ ಬೃಹತ್ ಪ್ರಮಾಣದಲ್ಲಿ ಆಲಿಕಲ್ಲು ಮಳೆ ಸುರಿದಿದ್ದು, ಬೆಳೆಗಳಿಗೆ ಹಾನಿಯಾಗಿದೆ.

## ಲಕ್ಷ್ಮೇಶ್ವರದಲ್ಲಿ ಶರಣರ ಆದರ್ಶ ಬದುಕಿನ ಕುರಿತು ಉಪನ್ಯಾಸದಲ್ಲಿ ಎಸ್.ಎಫ್. ಆದಿ ಅಭಿಮತ

# ಶರಣ ತತ್ವಗಳು ಸದಾಕಾಲಕ್ಕೂ ಶಾಶ್ವತ!




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

12ನೇ ಶತಮಾನದ ಶರಣರ ಬದುಕಿನ ಆದರ್ಶಗಳು ಕಾಯಕವೇ ಕೈಲಾಸ, ಸತ್ಯಶುದ್ಧ ನಡತೆ, ಸಮಾನತೆ ಮತ್ತು ದಯೆಯ ತತ್ವಗಳ ಮೇಲೆ ಆಧಾರಿತವಾಗಿವೆ ಎಂದು ನಿವೃತ್ತ ಶಿಕ್ಷಕ ಎಸ್.ಎಫ್. ಆದಿ ಹೇಳಿದರು.

ಸೋಮವಾರ ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ತಾಲೂಕ ಶರಣ ಸಾಹಿತ್ಯ ಪರಿಷತ್ತು ಮತ್ತು ಕದಳಿ ಮಹಿಳಾ ವೇದಿಕೆ ಇವರ ಸಹಯೋಗದಲ್ಲಿ ಬಸವರಾಜ ಚನ್ನಪ್ಪ ನೆಲವಿಗಿ ಹಾಗೂ ಸಾವಂತ್ರವ್ವ ಗುರುಬಸಪ್ಪ ಹೂವಿನ ಅವರ ಹೆಸರಿನಲ್ಲಿ ನೀಡಲಾದ ದತ್ತಿ ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿದರು.

ಶರಣರು ನಡೆ-ನುಡಿ ಒಂದಾಗಿರಬೇಕು ಎಂಬ ಮೂಲಮಂತ್ರದೊಂದಿಗೆ ಸರಳ, ಸ್ವಾರ್ಥರಹಿತ ಜೀವನ ನಡೆಸಿದರು.

"ಶರಣರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಪರಿಶುದ್ಧ ಮತ್ತು ಪ್ರಾಮಾಣಿಕ ಕಾಯಕವೇ ಮಾರ್ಗ."

**– ಎಸ್.ಎಫ್. ಆದಿ,** ನಿವೃತ್ತ ಶಿಕ್ಷಕ.


ಕಷ್ಟಪಟ್ಟು ಬಂದವರಿಗೆ ಅನ್ನ ನೀಡುವುದರ ಜೊತೆಗೆ ಕಾಯಕದಲ್ಲಿ ತೊಡಗುವಂತೆ ಪ್ರೇರೇಪಿಸಿ, ಎಲ್ಲರನ್ನೂ ಸನ್ಮಾರ್ಗದಲ್ಲಿ ನಡೆಯುವಂತೆ ಮಾರ್ಗದರ್ಶನ ನೀಡಿದರು ಎಂದರು.

ಪ್ರಾಣಿ-ಪಕ್ಷಿ ಸೇರಿದಂತೆ ಸಕಲ ಜೀವರಾಶಿಗಳ ಮೇಲೆ ದಯೆ ಮತ್ತು ಕರುಣೆ ತೋರುವುದು ಅವರ ಪ್ರಮುಖ ಬೋಧನೆ. ಪರಮಾತ್ಮನ ಸಾಕ್ಷಾತ್ಕಾರವೇ ಅವರ ಗುರಿಯಾಗಿದ್ದರೂ, ಸಂಸಾರಿಕ ಜವಾಬ್ದಾರಿಗಳನ್ನು ಬಿಟ್ಟುಬಿಡದೆ ಕಾಯಕದಲ್ಲೇ ಜೀವನ ಸಾಗಿಸಿದರು ಎಂದು ವಿವರಿಸಿದರು.

ದತ್ತಿದಾನಿ ಲೋಹಿತ ನೆಲವಿಗಿ ಮಾತನಾಡಿ, ಪ್ರತಿಯೊಬ್ಬರೂ ಪ್ರಾಮಾಣಿಕವಾಗಿ ದುಡಿದು ಬದುಕಬೇಕು. ಕಾಯಕದಲ್ಲಿ ಚಿಕ್ಕದು-ದೊಡ್ಡದು ಎಂಬ ಭೇದವಿಲ್ಲದೆ ಪ್ರತಿಯೊಂದು ಕೆಲಸವೂ ದೇವರ ಕೃಪೆಯೇ ಎಂಬ ನಂಬಿಕೆಯನ್ನು ಶರಣರು ಪಾಲಿಸಿಕೊಂಡಿದ್ದರು ಎಂದು ಹೇಳಿದರು. ಸಭೆಯ ಅಧ್ಯಕ್ಷತೆಯನ್ನು ತಾಲೂಕ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಲ್.ಎಸ್. ಅರಳಹಳ್ಳಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಸಾವಂತ್ರವ್ವ ಹೂವಿನ, ಡಾ. ಶಿವಾನಂದ ಹೂವಿನ, ದಿಗಂಬರ ಪೂಜಾರ, ಮಾಲಾದೇವಿ ದಂದರಗಿ, ನಿರ್ಮಲಾ ಅರಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಂಪೂರ್ಣ ಸಿದ್ಧತೆ

▸▸ಮೊದಲನೇ ಪುಟದಿಂದ



ಮಾಧ್ಯಮ ಪ್ರೌಢಶಾಲೆ, ಎಸ್‌ಜೆಎಫ್ ಪ್ರೌಢಶಾಲೆ ಬೆಳ್ಳಟ್ಟಿ, ಬಿ.ಎಫ್. ಅಳವಂಡಿ ಕೆಪಿಎಸ್ ಹಾಗೂ ಎನ್.ವಿ. ಅಂಗಡಿ ಸಂ.ಪ.ಪೂ. ಕಾಲೇಜು ಮಾಗಡಿ ಸೇರಿ 6 ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು, 1229 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ.

ಪರೀಕ್ಷೆ ನಿರ್ವಹಣೆಗೆ ಅಧೀಕ್ಷಕರು, ಕಸ್ಟೋಡಿಯನ್‌ಗಳು, ಜಾಗೃತದಳದ ಅಧಿಕಾರಿಗಳು, ಮಾರ್ಗಾಧಿಕಾರಿಗಳು, ಮೊಬೈಲ್ ಸ್ವಾಧೀನಾಧಿಕಾರಿಗಳು, ಕೊಠಡಿ ಮೇಲ್ವಿಚಾರಕರು, ಆರೋಗ್ಯ ಹಾಗೂ ಪೊಲೀಸ್ ಇಲಾಖೆ ಸಿಬ್ಬಂದಿ ಸೇರಿ ಒಟ್ಟು 338 ಮಂದಿ ಕಾರ್ಯನಿರ್ವಹಿಸಲಿದ್ದಾರೆ. ಮಾ.18ರಂದು ಪ್ರಥಮ ಭಾಷೆ ಕನ್ನಡ ವಿಷಯದ ಪರೀಕ್ಷೆಯಿಂದ ಪ್ರಾರಂಭವಾಗಲಿದೆ.

ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ಶಿಕ್ಷಣ ಸಂಯೋಜಕರಾದ ರಾಘವೇಂದ್ರ ಜೋಶಿ, ಉಮೇಶ ಹುಚ್ಚಯ್ಯನವರಮಠ ಹಾಗೂ ಉಮೇಶ ನೇಕಾರ ತಂಡ ಸಿದ್ಧತೆಗಳನ್ನು ಪರಿಶೀಲಿಸಿತು. ಮಾ.18ರಿಂದ ಎಪ್ರಿಲ್ 2ರವರೆಗೆ ಪರೀಕ್ಷೆ – ಎರಡು ತಾಲೂಕುಗಳಲ್ಲಿ 12 ಕೇಂದ್ರಗಳು, 2839 ವಿದ್ಯಾರ್ಥಿಗಳು ಹಾಜರು.

# ಇಂದಿನಿಂದ ಕರಿಯಮ್ಮದೇವಿ ಜಾತ್ರಾಮಹೋತ್ಸವಕ್ಕೆ ಚಾಲನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕರಿಯಮ್ಮಕಲ್ಲು ಬಡಾವಣೆಯಲ್ಲಿ ಕರಿಯಮ್ಮದೇವಿಯ 97ನೇ ಜಾತ್ರಾಮಹೋತ್ಸವ ಮಾ. 18ರಿಂದ 20ರವರೆಗೆ ಭಕ್ತಿಭಾವದಿಂದ ಹಾಗೂ ವೈವಿಧ್ಯಮಯ ಕಾರ್ಯಕ್ರಮಗಳೊಂದಿಗೆ ನಡೆಯಲಿದೆ ಎಂದು ಜಾತ್ರಾ ಸಮಿತಿಯ ಗೌರವಾಧ್ಯಕ್ಷ ಎಲ್.ಡಿ. ಚಂದಾವರಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾ. 18ರಂದು ಚಂಡಿಕಾ ಹೋಮದೊಂದಿಗೆ ಜಾತ್ರೆಗೆ ಚಾಲನೆ ನೀಡಲಾಗುವುದು. ಭಕ್ತರಿಗೆ ಬೆಳ್ಳಿ ಉತ್ಸವ ಮೂರ್ತಿಯ ದರ್ಶನ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಉದ್ಘಾಟನೆ ನೆರವೇರಿಸಲಿದ್ದು, ರಂಗೋಲಿ, ವಚನಗಾಯನ, ಚಿತ್ರಕಲೆ ಸ್ಪರ್ಧೆಗಳು ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಮಾಹಿತಿ ನೀಡಿದರು.

ಮಾ. 19ರಂದು ಮಹಾ ರಥೋತ್ಸವ ಮತ್ತು ಸಮುದಾಯ ಭವನದ ಶಂಕುಸ್ಥಾಪನೆ ಕಾರ್ಯಕ್ರಮ ನಡೆಯಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಭಾಗವಹಿಸಲಿದ್ದಾರೆ.

ಮಾ. 20ರಂದು ಅನ್ನಸಂತರ್ಪಣೆ ಹಾಗೂ ಕಡುಬಿನ ಕಾಳಗ ಸೇರಿದಂತೆ ಹಲವಾರು ಕಾರ್ಯಕ್ರಮಗಳು ನಡೆಯಲಿವೆ. ಜೊತೆಗೆ ದಾನಿಗಳು ಹಾಗೂ ಗಣ್ಯರನ್ನು ಸನ್ಮಾನಿಸಲಾಗುತ್ತದೆ ಎಂದು ತಿಳಿಸಿದರು.

"ಜಾತ್ರೆಯಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕು" ಎಂದು ಎಲ್.ಡಿ. ಚಂದಾವರಿ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಎಚ್.ಬಿ. ಶಿರಗುಂಪಿ, ಸಿ.ಕೆ. ಮಾಳಶೆಟ್ಟಿ, ಜಿ.ಕೆ. ತಮ್ಮಣ್ಣವರ, ಜೆ.ಬಿ. ಗಾರವಾಡ, ಬಿ.ಎಸ್. ಕಂಠಿ, ಜಗದೀಶ ಪೂಜಾರ, ವಿಜಯಲಕ್ಷ್ಮಿ ದಿಂಡೂರ, ಎಸ್.ಬಿ. ಹಡಗಲಿ, ಎಂ.ಡಿ. ದೇಸಾಯಿಗೌಡ್ರ, ಆರ್.ಬಿ. ಕುಲಕರ್ಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪುನೀತ್ ರಾಜಕುಮಾರ್ ಜನ್ಮದಿನದ ಅಂಗವಾಗಿ ಅನ್ನಸಂತರ್ಪಣೆ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದಲ್ಲಿ ದಿವಂಗತ ನಟ ಪುನೀತ್ ರಾಜಕುಮಾರ್ ಅವರ ಜನ್ಮದಿನದ ಅಂಗವಾಗಿ ಅರ್ಥಪೂರ್ಣ ಅನ್ನಸಂತರ್ಪಣೆ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಪಟ್ಟಣದ ಪುನೀತ್ ರಾಜಕುಮಾರ್ ಸರ್ಕಲ್‌ನಲ್ಲಿ ನಡೆದ ಈ ಕಾರ್ಯಕ್ರಮವನ್ನು ಅಂಬುಲೆನ್ಸ್ ಚಾಲಕರಾದ ಪ್ರವೀಣ್ ಅವರ ಕುಟುಂಬದವರು ತಮ್ಮ ವೈಯಕ್ತಿಕ ವೆಚ್ಚದಲ್ಲಿ ಹಮ್ಮಿಕೊಂಡಿದ್ದು ವಿಶೇಷವಾಗಿತ್ತು. ಕಾರ್ಯಕ್ರಮ ಸರಳವಾಗಿ, ವ್ಯವಸ್ಥಿತವಾಗಿ ನಡೆಯಿತು.

ಕಾರ್ಯಕ್ರಮದಲ್ಲಿ ಅನ್ನಸಂತರ್ಪಣೆ ನಡೆಸಲಾಗಿದ್ದು, ಸ್ಥಳೀಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸೇವಾ ಕಾರ್ಯಕ್ಕೆ ಬೆಂಬಲ ವ್ಯಕ್ತಪಡಿಸಿದರು. ಸಮಾಜದ ಮೇಲಿನ ಕಾಳಜಿಯನ್ನು ತೋರಿದ ಈ ಪ್ರಯತ್ನಕ್ಕೆ ಸಾರ್ವಜನಿಕರಿಂದ



ಉತ್ತಮ ಸ್ಪಂದನೆ ಮತ್ತು ಮೆಚ್ಚುಗೆ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರವೀಣ್, "ಪುನೀತ್ ರಾಜಕುಮಾರ್ ಅವರು ತಮ್ಮ ಜೀವನದಲ್ಲಿ ಅನೇಕ ಸಮಾಜಮುಖಿ ಕಾರ್ಯಗಳ ಮೂಲಕ ಜನರ ಮನ ಗೆದ್ದಿದ್ದಾರೆ. ಅವರ ಆದರ್ಶಗಳು ನಮ್ಮ ಜೀವನಕ್ಕೆ ದಾರಿ ತೋರಿಸುತ್ತವೆ. ಅವರ ಜನ್ಮದಿನದಂದು ಜನರಿಗೆ ಸಹಾಯಕವಾಗುವ ಕೆಲಸ ಮಾಡಬೇಕು ಎಂಬ ಉದ್ದೇಶದಿಂದ ಈ ಅನ್ನದಾನ ಹಮ್ಮಿಕೊಂಡಿದ್ದೇನೆ" ಎಂದು ಹೇಳಿದರು.

ಶಿವಕುಮಾರ್ ಕೆ. ಮಾತನಾಡಿ "ಇಂತಹ ಕಾರ್ಯಕ್ರಮಗಳು ಸಮಾಜದಲ್ಲಿ ಸಹಕಾರ ಮತ್ತು ಒಗ್ಗಟ್ಟಿನ ಭಾವನೆ ಹೆಚ್ಚಿಸುತ್ತವೆ. ನಮ್ಮ ಅಣ್ಣ ಪ್ರವೀಣ್ ಅವರ ಈ ಪ್ರಯತ್ನ ಶ್ಲಾಘನೀಯವಾಗಿದ್ದು, ಇತರರಿಗೂ ಪ್ರೇರಣೆಯಾಗಿದೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಂಜು, ವೀರೇಶ್ ಪಾಟೀಲ್, ರಿಯಾಜ್, ಗಜ, ನಿರ್ಮಲ, ಪಾಂಡು, ಆಟೋ ಚಿನ್ನಿ ಸೇರಿದಂತೆ ಅಪ್ಪು ಅಭಿಮಾನಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka